MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 271 | ಬುಧವಾರ : 13–08–2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2–00

VOLUME: 04 | ISSUE: 271 | WEDNESDAY : 13–08–2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

# ರಾಯಚೂರಿನಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳಿಂದ ಬೃಹತ್ ಪ್ರತಿಭಟನೆ



ಯುವ ಮಾರ್ಗ ಸುದ್ದಿ

**ರಾಯಚೂರು,ಆ.12**–ರಾಯಚೂರು ಜಿಲ್ಲೆಯ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಲಾಯಿತು. ಒಕ್ಕೂಟದ ವತಿಯಿಂದ ಮುಖ್ಯಮಂತ್ರಿ ಸಿದ್ದರಾ ಮಯ್ಯ ಅವರಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಯಿತು.

ಸುಮಾರು 5000ಕ್ಕೂ ಹೆಚ್ಚು ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ, ಶಿಕ್ಷಕರು ಮತ್ತು ಉಪನ್ಯಾಸಕರು ಈ ಜಾಥಾದಲ್ಲಿ ಭಾಗವಹಿಸಿದ್ದರು. ಖಾಸಗಿ ಶಿಕ್ಷಣ ಸಂಸ್ಥೆಗಳು ಎದುರಿಸುತ್ತಿರುವ ಹಲವು ಸಮಸ್ಯೆಗಳನ್ನು ಬಗೆಹರಿಸುವಂತೆ ಮನವಿಯಲ್ಲಿ ಒತ್ತಾಯಿಸಲಾಗಿದೆ.

ಶಾಲೆ ಮತ್ತು ಕಾಲೇಜುಗಳ ಮಾನ್ಯತೆ ಮತ್ತು ನವೀಕರಣ ಪ್ರಕ್ರಿಯೆಯಲ್ಲಿನ ಗೊಂದಲಗಳನ್ನು ನಿವಾರಿಸಿ, ಆನ್‌ಲೈನ್ ವ್ಯವಸ್ಥೆಯನ್ನು ಸರಳೀಕರಣಗೊಳಿ ಸಬೇಕು. ಅಗ್ನಿಶಾಮಕ ಸುರಕ್ಷತೆ ಪ್ರಮಾಣಪತ್ರ ಪಡೆಯುವ ಪ್ರಕ್ರಿಯೆಯನ್ನು ಸುಲಭಗೊಳಿಸಿ, ನಿಗದಿತ ಅವಧಿಯಲ್ಲಿ ಪ್ರಮಾಣಪತ್ರಗಳು ಸಿಗುವಂತೆ ಮಾಡ ಬೇಕು. ಕಲ್ಯಾಣ ಕರ್ನಾಟಕ ಭಾಗದಲ್ಲಿ 1995ರಿಂದ ಕಾರ್ಯ ನಿರ್ವಹಿಸುತ್ತಿರುವ ಖಾಸಗಿ ಶಿಕ್ಷಣ ಸಂಸ್ಥೆಗಳನ್ನು ವೇತಾನುದಾನಕ್ಕೆ ಒಳಪಡಿಸಬೇಕು. ಅಲ್ಲದೆ, ಮೂಲಭೂತ ಸೌಕರ್ಯಗಳಿಗಾಗಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯಿಂದ ಆರ್ಥಿಕ ನೆರವು ಒದಗಿಸಬೇಕು.ಖಾಸಗಿ ಶಾಲೆ ಮತ್ತು ಕಾಲೇಜುಗಳ ಶಿಕ್ಷಕರು ಹಾಗೂ ಬೋಧಕೇತರ ಸಿಬ್ಬಂದಿಯನ್ನು ಸರ್ಕಾರದ ಆರೋಗ್ಯ ವಿಮಾ ಯೋಜನೆಯಡಿ ತರಬೇಕು.ಈಗಾಗಲೇ ಕಟ್ಟಡಗಳನ್ನು ಹೊಂದಿರುವ ವಿದ್ಯಾ ಸಂಸ್ಥೆಗಳ ಮಾನ್ಯತೆ ನವೀಕರಣಕ್ಕೆ ವಿಧಿಸಲಾಗಿರುವ ಭೂಪರಿವರ್ತನೆ ಷರತ್ತನ್ನು ತೆಗೆದುಹಾಕಬೇಕು. ಖಾಸಗಿ ಶಿಕ್ಷಣ ಸಂಸ್ಥೆಗಳ ಶಿಕ್ಷಕರು ಮತ್ತು ಉಪನ್ಯಾಸಕರಿಗೂ ಸರ್ಕಾರದಿಂದ ನೀಡುವ ತರಬೇ ತಿಗಳಿಗೆ ಅವಕಾಶ ನೀಡಬೇಕು.ಆರ್.ಟಿ.ಇ. ಯೋಜನೆಯಡಿ ಶಾಲೆಗಳಿಗೆ ಬರಬೇಕಾದ ಹಣವು ಸಕಾಲಕ್ಕೆ ಸಿಗುವಂತೆ ನೋಡಿಕೊಳ್ಳಬೇಕು. ಅಲ್ಲದೆ, ಆರ್.ಟಿ.ಐ. ಯೋಜನೆಯನ್ನು ಮತ್ತೆ ಪ್ರಾರಂಭಿಸಬೇಕು.

ಶಿಕ್ಷಣ ಕ್ಷೇತ್ರವನ್ನು ಜಿ.ಎಸ್.ಟಿ. ವ್ಯಾಪ್ತಿಯಿಂದ ಹೊರಗಿಡಬೇಕು ಮತ್ತು ಜಿ.ಎಸ್.ಟಿ. ಪಾವತಿ ಸುವಂತೆ ವಿಶ್ವವಿದ್ಯಾಲಯಗಳು ನೀಡಿರುವ ನೋಟಿಸ್‌ಗಳನ್ನು ಹಿಂಪಡೆಯಬೇಕು.ಖಾಸಗಿ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿ ಮೇಲೆ ನಡೆಯುತ್ತಿರುವ ದೌರ್ಜನ್ಯ ಮತ್ತು ಹಲ್ಲೆಗಳನ್ನು ತಡೆಯಲು ಶೈಕ್ಷಣಿಕ ವರ್ಷ ಪ್ರಾರಂಭಕ್ಕೂ ಮುನ್ನವೇ ಕೆ.ಟಿ.ಬಿ.ಎಸ್.ನಿಂದ ಪಾಠ್ಯಪುಸ್ತಕಗಳು ಲಭ್ಯವಾಗುವಂತೆಮಾಡಬೇಕು. ಇಲ್ಲದಿದ್ದರೆ, ನಿಗದಿತ ಬೆಲೆಯಲ್ಲಿ ಮುಕ್ತ ಮಾರುಕಟ್ಟೆಯಲ್ಲಿ ಪುಸ್ತಕಗಳು ಸಿಗುವಂತೆ ಕ್ರಮ ಕೈಗೊಳ್ಳಬೇಕು. ಗ್ರಾಮೀಣ ಪ್ರದೇಶದ ಶಾಲಾ–ಕಾಲೇಜುಗಳಿಗೆ ಆಸ್ತಿ ತೆರಿಗೆಯಿಂದ ವಿನಾಯಿತಿ ನೀಡಬೇಕು. ಶಿಕ್ಷಣ ಕ್ಷೇತ್ರದಲ್ಲಿ ವಸತಿ ಶಾಲೆಗಳ ಆರಂಭ ಮತ್ತು ನಿರ್ವಹಣೆಗೆ ರಾಜ್ಯ ಸರ್ಕಾರ ಸೂಕ್ತ ನಿಯಮಗಳನ್ನು ರೂಪಿಸಬೇಕು. ಜಿಲ್ಲಾ ಮತ್ತು ತಾಲ್ಲೂಕು ಕೇಂದ್ರಗಳಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಶಿಕ್ಷಕರ ತರಬೇತಿ ಮತ್ತು ಶೈಕ್ಷಣಿಕ ಚಟುವಟಿಕೆಗಳಿಗಾಗಿ ಕಟ್ಟಡ ನಿರ್ಮಿಸಲು ನಿವೇಶನಗಳನ್ನು ಮಂಜೂರು ಮಾಡಬೇಕು. ಚುನಾವಣೆ ಸಂದರ್ಭದಲ್ಲಿ ಬಳಸುವ ಶಾಲಾ–ಕಾಲೇಜು ವಾಹನಗಳಿಗೆ ಕೆ.ಎಸ್.ಆರ್.ಟಿ.ಸಿ. ವಾಹನಗಳಿಗೆ ನೀಡುವಂತೆ ಬಾಡಿಗೆ ಮತ್ತು ಭತ್ಯೆ ನೀಡಬೇಕು.

ಒಕ್ಕೂಟದ ನಾಯಕರು, ಕಲ್ಯಾಣ ಕರ್ನಾಟಕ ಭಾಗದ ಶೈಕ್ಷಣಿಕ ಅಭಿವೃದ್ಧಿಗೆ ಸರ್ಕಾರದ



ಬೆಂಬಲ ಅತ್ಯಗತ್ಯ ಎಂದು ಹೇಳಿದ್ದಾರೆ. ಈ ಬೇಡಿಕೆಗಳನ್ನು ಈಡೇರಿಸುವ ಮೂಲಕ ಸರ್ಕಾರವು ಶೈಕ್ಷಣಿಕ ಕ್ಷೇತ್ರಕ್ಕೆ ಮಹತ್ತರ ಕೊಡುಗೆ ನೀಡಬೇಕೆಂದು ಮನವಿಯಲ್ಲಿ ಕೋರಲಾಗಿದೆ. ಈ ಸಂದರ್ಭದಲ್ಲಿ ಅಧ್ಯಕ್ಷ ಹಂಪನಗೌಡ ಬಾದರ್ಲಿ, ಪ್ರಧಾನ ಕಾರ್ಯದರ್ಶಿ ನಾಗರಾಜ, ಮುಷ್ಟೂರು ದೊಡ್ಡ ಬಸವರಾಜ, ಹೆಚ್.ಶರ್ಪುದ್ದೀನ್ ಪೋತ್ನಾಳ, ನರಸಿಂಹರಾವ್ ಕುಲಕರ್ಣಿ, ಎಸ್.ಎಲ್.ಕೇಶವರೆಡ್ಡಿ, ಶಿವಕುಮಾರ.ಎಸ್, ಶಾಂತನಗೌಡ, ಒಕ್ಕೂಟದ ಪದಾಧಿಕಾರಿಗಳಾದ ಸೇಕ್ ಫರೀದ್ ಉಮ್ರಿ, ಎಂ ಎ ಎಚ್ ಮುಕೀಮ್ ರಾಜ ಸುಭಾಷ್ ಚಂದ್ರ ನಾಯಕ್, , ಬಿ ವಿ ರೆಡ್ಡಿ, ಮನೋಜ್ ಮಿಶ್ರಾ ಅನಿಲ್ ಕುಮಾರ್ ಊ, ಭೀಮರಾಯ ಸಿತಿಮನಿ, ಅಖಿಲೇಶ್ ಕುರುಡಿ, ಸೈಯದ್ ಅಹಮದ್ ಹುಸೇನಿ ಮತವಲೆ, ಪ್ರಭೂ ಟಕ್ಕಳಕಿ, ಆಲೀಮ್ ಖಾನ್ , ಶಂಕ್ರಪ್ಪ ಅಂಗಡಿ , ಹುಸೇನ್ ಬಾಷಾ,ಶ್ರೀಮತಿ ,ಸರಿತಾ ಜೈನ್, ಮಹಮ್ಮದ್ ಹರುನ್, ಮುಸ್ತಫ ಖಾದ್ರಿ, ಅಬ್ದುಲ್ ರಹೀಂ, ಕೃಷ್ಣಾರೆಡ್ಡಿ, ಶರಣಬಸವ ನೀರಮಾನವಿ, ಆನಂದ, ರಾಜು ತಾಳಿಕೋಟಿ, ಇರ್ಫಾನ್ ಕೆ ಅತ್ತರ, ನಾಗೇಶ್ವರ ಅಂಜನ ರೆಡ್ಡಿ ಚಂದ್ರಶೇಖರ್ ಮುಂತಾದವರು ಉಪಸ್ಥಿತರಿದ್ದರು ಮಲ್ಲಪ್ಪ, ಬಸವರಾಜ ಪಾಟೀಲ್, ನರಸಪ್ಪ, ಟಿ.ಬಸವರಾಜ, ಥಾಮಸ್ ಬೆಂಜಮಿನ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ವಿವಿಧ ಬೇಡಿಗೆ ಈಡೇರಿಕೆಗೆ ಒತ್ತಾಯಿಸಿ ಖಾಸಗಿ ಶಿಕ್ಷಣ ಸಂಸ್ಥೆಗಳ ಬ್ರಹತ್ ಜಾಥಾ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.12**–ರಾಯಚೂರಿನಲ್ಲಿ ನಡೆದ ಖಾಸಗಿ ಶಿಕ್ಷಣ ಸಂಸ್ಥೆಗಳ ಒಕ್ಕೂಟದಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿ ಹಾಗೂ ಶಾಲಾ ಕಾಲೇಜುಗಳ ಶಿಕ್ಷಕರ ಮತ್ತು ಉಪನ್ಯಾಸಕರು ಸೇರಿ ಸುಮಾರು 5000ಕ್ಕೂ ಹೆಚ್ಚು ಜನ ಸೇರಿ ಹಮ್ಮಿಕೊಂಡ ಜಾಥಾದಲ್ಲಿ ಲಿಂಗಸಗೂರು ತಾಲೂಕಿನ ವಿವಿಧ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು ಹಾಗೂ ಸಿಬ್ಬಂದಿಗಳು ಭಾಗವಹಿಸಿ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರಿಗೆ ಬೇಡಿಕೆ ಈಡೇರಿಕೆಗೆ ಒತ್ತಾಯಿಸಲಾಯಿತು.

ಈ ಸಂದರ್ಭದಲ್ಲಿ ಸರ್ಕಾರಕ್ಕೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿದರು, ಇದರಲ್ಲಿ ನವೀಕರಣ ವ್ಯವಸ್ಥೆಗಾಗಿ ಇರುವ ಅಂತರ್ಜಾಲದಲ್ಲಿ ಸರಳೀಕರಣ ಗೊಳಿಸುವುದು, ಅಗ್ನಿಶಾಮಕ ಸುರಕ್ಷತೆ ಪ್ರಮಾಣ ಪತ್ರದ ನಿಯಮವಳಿ ಸರಲೀಕರಣ ಮಾಡುವದು,1995 ರ ನಂತರ ಪ್ರಾರಂಭ ವಾದ ಎಲ್ಲಾ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸಬೇಕು ಖಾಸಗಿ ಶಿಕ್ಷಣ ಸಂಸ್ಥೆ ಯಲ್ಲಿ ದುಡಿಯುವ ಎಲ್ಲಾ ಸಿಬ್ಬಂದಿಗಳಿ ಗೂ ಸರ್ಕಾರದ ಆರೋಗ್ಯ ವಿಮೆ ಯೋ ಜನ



'ಗೆ ಒಳಪಡಿಸುವುದು.ಇನ್ನೂ ಮುಂ ತಾದ 14 ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಜಿಲ 'ಯ ಎಲ್ಲಾ ಶಿಕ್ಷಣ ಸಂಸ್ಥೆಗಳು ಸೇರಿ ಡಾ.ಬಿ. ಆರ್.ಅಂಬೇಡ್ಕರ್ ಮೂರ್ತಿಗೆ ಮಾಲಾಪ 'ಣೆ ಮಾಡಿ ಜಾಥಾಕೆ ಚಾಲನೆ ನೀಡಿದರು. ಇದರಲ್ಲಿ ಲಿಂಗಸಗೂರಿನ ಖಾಸಗಿ ಶಿಕ್ಷಣ ಸಂಸ್ಥೆಗಳು ಭಾಗವಹಿಸಿದ್ದವು.

**ಸರ್ಕಾರ ಖಾಸಗಿ ಶಿಕ್ಷಣ ಸಂಸ್ಥೆಗಳ ಕಾಲೇಜು ಮಾನ್ಯತೆ ನವೀಕರಣವನ್ನು ಸರಲೀಕರಣಗೊಳಿಸಬೇಕು, ಕಲ್ಯಾಣ ಕರ್ನಾಟಕ ಅಭಿವೃದ್ಧಿ ಅನುದಾನದಲ್ಲಿ 1995 ರ ನಂತರ ಪ್ರಾರಂಭವಾದ ಎಲ್ಲಾ ಶಿಕ್ಷಣ ಸಂಸ್ಥೆಗಳನ್ನು ಅನುದಾನಕ್ಕೆ ಒಳಪಡಿಸಿ ಖಾಸಗಿ ಸಂಸ್ಥೆಗಳ ಹಿತ ಕಾಪಾಡಬೇಕು.**

**–ವಿನಯುಕುಮಾರ ಗಣಾಚಾರಿ, ಆಡಳಿತಾಧಿ ಕಾರಿಗಳುಸಮ್ ಸಮೂಹ ಸಂಸ್ಥೆಗಳ ಒಕ್ಕೂಟ ಲಿಂಗಸುಗೂರು**

ಈ ಸಂದರ್ಭದಲ್ಲಿ ವಿವಿಧ ಕಾಲೇಜಿನ ಆಡಳಿತ ಮಂಡಳಿಯ ಸದಸ್ಯರಾದ ಬಸವತಾರಾಯ ಕುರಿ, ಸಂಜೀವಕುಮಾರ ಕಂದಗಲ್, ಶಾಂತಕುಮಾರ ಪಾಟೀಲ್, ಎಚ್ ಎಸ್ ಬಿರಾದಾರ, ನರಸಪ್ಪ ಯಾದವ, ಪ್ರಾಚಾರ್ಯರಾದ ವಿರೇಶ ಆದೋನಿ, ಅಮರೇಶಸ್ವಾಮಿ, ಮಂಜುನಾಥ್, ಯಮನೂರಪ್ಪ, ಚನ್ನಬಸವ, ಮಸ್ತಾನ್, ಶಂಕ್ರಪ್ಪ ಸೇರಿದಂತೆ ಸಿಬ್ಬಂದಿಗಳು ಇದ್ದರು.

## ರಾಯಚೂರು ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಶೂನ್ಯಕ್ಕಿಳಿಯಲಿ: ಜಿಪಂ ಸಿಇಓ

ಯುವ ಮಾರ್ಗ ಸುದ್ದಿ

**ರಾಯಚೂರು,ಆ.12**–ಕುಟುಂಬದ ಜವಾಬ್ದಾರಿ, ಹೆರಿಗೆ, ಮಕ್ಕಳ ಲಾಲನೆ–ಪಾಲನೆ, ವೈಯಕ್ತಿಕ ಆರೋಗ್ಯ ನಿರ್ವಹಣೆಯನ್ನು ನಿಭಾಯಿಸಲು ಮಹಿಳೆಗೆ ಮಾನಸಿಕ ಸದೃಢತೆ ಮುಖ್ಯವಾಗಿದೆ. ಬಾಲ್ಯದಲ್ಲಿಯೇ ಮದುವೆ ಮಾಡುವುದರಿಂದ ಇವೆಲ್ಲಕ್ಕೆ ಅಡೆತಡೆಯಾಗಲಿದೆ. ಆದ್ದರಿಂದ ಜಿಲ್ಲೆಯಲ್ಲಿ ಬಾಲ್ಯವಿವಾಹ ತಡೆಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ ಕಾಂದೂ ಅವರು ಹೇಳಿದರು.

ಮಂಗಳವಾರ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ಆರೋಗ್ಯ ಸಂಘದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ್ಯವಿವಾಹದಿಂದ ಮಕ್ಕಳಿಗೆ ಮೇಲಿಂದ ಮೇಲೆ ಕಾಯಿಲೆಗಳ ಬರುವಿಕೆ,



ಅಕಾಲಿಕ ಗರ್ಭಪಾತ, ಕೊರಳಿಗೆ ಹೊಕ್ಕಳು ಬಳ್ಳಿ ಸುತ್ತಿ ಮಗು ಜನಿಸುವುದು, ಶಿಶು ಮರಣ, ತಾಯಿ ಮರಣ, ಮುಂತಾದವುಗಳ ಜೊತೆಗೆ ಕಾನೂನಾತ್ಮಕವಾಗಿ ಶಿಕ್ಷೆ ಇರುವ ಕುರಿತು ಸಾರ್ವಜನಿಕರಿಗೆ ತಿಳಿಹೇಳಬೇಕು. ರಾಯಚೂರು ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಶೂನ್ಯಕ್ಕಿಳಿಯಬೇಕು ಎಂದು ಸೂಚನೆ ನೀಡಿದರು.

**ಲಸಿಕೆಗಳನ್ನು ತಪ್ಪದೇ ಹಾಕಿಸಿ:** ಹೆರಿಗೆ ನಂತರದಲ್ಲಿ ನವಜಾತ ಶಿಶುವಿಗೆ 12 ಮಾರಕ ರೋಗಗಳ ವಿರುದ್ಧ ರೋಗ ನಿರೋಧಕ ಶಕ್ತಿಯನ್ನು ಹೆಚ್ಚಿಸಲು ಸಹಾಯಕವಾಗುವ ಲಸಿಕೆಗಳನ್ನು ತೋಟದ ಮನೆಗಳು, ದೊಡ್ಡಿ, ಹಟ್ಟಿ, ತಾಂಡಾ,

ಕ್ಯಾಂಪ್‌ಗಳಲ್ಲಿ ತಪ್ಪದೇ ನೀಡಬೇಕು. ಯಾರಾದರೂ ತಪ್ಪು ನಂಬಿಕೆ ಹೊಂದಿದ ಪಾಲಕರು ಇದ್ದರೆ ಅವರಿಗೆ ಸರಿಯಾಗಿ ಮನವರಿಕೆ ಮಾಡಿ ಲಸಿಕೆ ಹಾಕಿಸಲು ಸೂಚಿಸಿದರು.(2ನೇಪುಟಕ್ಕೆ)

## ಸಚಿವ ಸ್ಥಾನದಿಂದ ಕೆ.ಎನ್.ರಾಜಣ್ಣ ವಜಾ ಖಂಡನೀಯ: ಶರಣಬಸವನಾಯಕ

ಯುವ ಮಾರ್ಗ ಸುದ್ದಿ



**ಮಾನ್ವಿ,ಆ.12**– ನಾಯಕ ಸಮುದಾಯದ ಹಿರಿಯ ನಾಯಕ ಮುತ್ಸದ್ದಿ ಸರಳ ರಾಜಕಾರಣಿ ಕರ್ನಾಟಕ ಸರ್ಕಾರದ ಸಹಕಾರಿ ಸಚಿವ ಕೆ.ಎನ್.ರಾಜಣ್ಣ ಅವರನ್ನು ಸಚಿವ ಸಂಪುಟದಿಂದ ಏಕಾಏಕಿ ವಜಾಗೊಳಿಸಿ ನಿರ್ಧಾರ ಖಂಡನೀಯವಾಗಿದೆ ಎಂದು ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ಜಿಲ್ಲಾಧ್ಯಕ್ಷ ಶರಣಬಸವ ನಾಯಕ ಜಾನೇಕಲ್ ಆಗ್ರಹಿಸಿದ್ದಾರೆ.

ನಾನು ಸದಾ ಅಹಿಂದ ಪರ ಎಂದು ಹೇಳಿಕೊಳ್ಳುವ ಅವರು ಎಲ್ಲಿದೆ ನಿಮ್ಮ ಅಹಿಂದ ತತ್ವ ಸಿದ್ದಾಂತ..? ತಳ ಸಮುದಾಯದಿಂದ ರಾಜಕೀಯವಾಗಿ ಬೆಳೆದ ಸಚಿವ ಕೆ.ಎನ್.ರಾಜಣ್ಣ ಅವರು ನೇರ ನುಡಿಯ ಸರಳ ವ್ಯಕ್ತಿಯದ ಹಿರಿಯ ರಾಜಕಾರಣಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ತರುವಲ್ಲಿ ತುಂಬಾ ಶ್ರಮಿಸಿದ್ದಾರೆ. ಪಕ್ಷದಲ್ಲಿ ನಿಷ್ಠುರವಾಗಿ ಮಾತನಾಡಿದ್ದೇ ತಪ್ಪಾಗಿದೆಯಾ.. ಸಿಎಂ ಅವರು ಸದಾ ತಮ್ಮ ಮಾತಿನಲ್ಲಿ ಪ್ರಜಾಪ್ರಭುತ್ವ, ಅಹಿಂದ ಹಾಗೂ ದಲಿತರ ಪರ, ತಳ ಸಮುದಾಯಗಳ ಪರವಾಗಿ ನಾನು ಇದ್ದೇನೆ ಎಂದು ಹೇಳುವ ನಿಮ್ಮನ್ನು ನಂಬಿ ಇಂದು ರಾಜ್ಯದಲ್ಲಿ ಎಸ್ಟಿ ಮೀಸಲಾತಿ ಕ್ಷೇತ್ರಗಳಿಂದ 15ಕ್ಕೂ ಹೆಚ್ಚು ಕಾಂಗ್ರೆಸ್ ಶಾಸಕರನ್ನು ಗೆಲ್ಲಿಸಿ ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ರಚನೆಗೆ ವಾಲ್ಮೀಕಿ ಸಮುದಾಯದ ಕೊಡುಗೆ ಅಪಾರವಿದೆ. ಆದರೆ ನಮ್ಮ ಸಮುದಾಯದ ಒಬ್ಬೊಬ್ಬ ಸಚಿವರ,ಶಾಸಕರುಗಳ ತಲೆ ದಂಡವಾಗುತ್ತಿದೆ. ಈ ಹಿಂದೆ ಬಳ್ಳಾರಿಯ ನಾಗೇಂದ್ರ ನಂತರ ದಲ್ಲಿ ಕೆ.ಎನ್ ರಾಜಣ್ಣ ಮುಂದೆ ಯಾರೆಂಬ ಪ್ರಶ್ನೆ ಮೂಡುವಂತಾಗಿದೆ. ಪ್ರಸ್ತುತ ರಾಜಕೀಯ ಬೆಳವಣಿ ಗೆಯಿಂದಾಗಿ ವಾಲ್ಮೀಕಿ ಸಮು ದಾಯಕ್ಕೆ ಕಾಂಗ್ರೆಸ್ ಲಕ್ಷದಿಂದ ಅನ್ಯಾಯವಾಗುತ್ತಿದ್ದು, ಕೂಡಲೇ ನ್ಯಾಯವನ್ನು ಒದಗಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿಗಳು ಮಾಜಿ ಸಚಿವ ನಾಗೇಂದ್ರ ಮತ್ತು ಕೆ.ಎನ್.ರಾಜಣ್ಣನವರನ್ನು ಪುನಃ ಸಚಿವ ಸಂಪುಟಕ್ಕೆ ಸೇರಿಸಿಕೊಳ್ಳಬೆಂದು ಇಂದು ಪತ್ರಿಕಾ ಪ್ರಕಟಣೆ ಮೂಲಕ ಅಖಿಲ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಯುವ ಘಟಕದ ಜಿಲ್ಲಾಧ್ಯಕ್ಷ ಶರಣಬಸವ ನಾಯಕ ಜಾನೇಕಲ್ ಆಗ್ರಹಿಸಿದ್ದಾರೆ.

## ವಸತಿ ನಿಲಯದ ವಿದ್ಯಾರ್ಥಿಗಳಿಗೆ ಬಸ್ ಸೌಲಭ್ಯ ಒದಗಿಸಿ : ಕರವೇ ಒತ್ತಾಯ

ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಆ.12**– ರಾಯಚೂರು ರಸ್ತೆಗೆ ಹೊಂದಿಕೊಂಡಿರುವ ಮೇಟ್ರಿಕ್ ನಂತರದ ವಸತಿ ನಿಲಯದ ವಿದ್ಯಾಥಿ‍ಗಳಿಗೆ ಹಾಗೂ ತಾಲೂಕಿನ ಅಡವಿಭಾವಿ ಹತ್ತಿರ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಶಾಲೆ–ಕಾಲೇಜುಗಳು ಹೋಗಲು ಬಸ್ ಸೌಲಭ್ಯ ಕಲ್ಪಿಸಬೇಕೆಂದು ಒತ್ತಾಯಿಸಿ ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಕುಮಾರ ಶೆಟ್ಟಿ ಬಣ) ಕಾರ್ಯಕರ್ತರು ಘಟಕ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿದರು.

ವಿದ್ಯಾರ್ಥಿಗಳಿಗೆ ಮದ್ಯಾನ ಊಟಕ್ಕೆ ಹೋಗಿ ಬರಲು ಸಾಧ್ಯವಾಗದೇ ಸಂಜೆಯ ವರೆಗು ಉಪವಾಸ ಇರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ. ಇದರಿಂದ ವಿದ್ಯಾರ್ಥಿಗಳು ಕಲಿಕೆಯಲ್ಲಿ ಸಾಕಷ್ಟು ಹಿಂದುಳಿಯಲು ಕಾರಣವಾಗುತ್ತದೆ.

ಜೊತೆಗೆ ಪ್ರತಿನಿತ್ಯ ರಸ್ತೆಯಲ್ಲಿ ನಿಂತು ಕೊಂಡು ಹೋಗೊ ಬರೋ ದ್ವಿಚಕ್ರ ವಾಹನಕ್ಕೆ ಕೈ ಎತ್ತಿ ನಿಲ್ಲಿಸಿ ವಸತಿ ನಿಲಯಗ



ಳಿಗೆ ಹೋಗುತ್ತಿರುವ ದೃಶ್ಯ ಸಾಮಾನ್ಯವಾಗಿದೆ. ಇದರಿಂದಾಗಿ ದಿನನಿತ್ಯ ವಿದ್ಯಾರ್ಥಿಗಳು ತುಂಬ ಸಂಕಷ್ಟ ಅನುಭವಿಸುವಂತಾಗಿದೆ.ವಿದ್ಯಾಭ್ಯಾಸಕ್ಕೂ ತೊಂದರೆಯಾಗಿ ಅಭ್ಯಾಸದಲ್ಲಿ ಹಿಂದುಳಿಯುವಂತಾಗಿದೆ.

ಕಾರಣ ಅಡವಿಭಾವಿ ಹತ್ತಿರ ಇರುವ ವಸತಿ ನಿಲಯದ ಬಳಿ ಹಾಗೂ ರಾಯಚೂರು ರಸ್ತೆಗೆ ಹೊಂದಿಕೊಂಡಿರುವ ಮೇಟ್ರಿಕ್ ನಂತರದ ವಸತಿ ನಿಲಯದ ಬಳಿ ಎಲ್ಲಾ ಬಸ್‌ಗಳು ನಿಲುಗಡೆ ಮಾಡಬೇಕು ಇದರಿಂದ ವಿದ್ಯಾರ್ಥಿಗಳಿಗೆ ತುಂಬ ಅನುಕೂಲವಾಗುತ್ತದೆ ಇಲ್ಲವಾದಲ್ಲಿ ವಿದ್ಯಾರ್ಥಿಗಳ ಜೊತೆಗೂಡಿ ಪ್ರತಿಭಟನೆ ಮಾಡಲಾಗುವುದೆಂದು ಮನವಿ ಪತ್ರದ ಮೂಲಕ ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಅಧ್ಯಕ್ಷ ಆಂಜನೇಯ ಭಂಡಾರಿ, ಭೀಮೇಶ ನಾಯಕ, ಕುರುಮೇಶ ನಾಯಕ, ಉಮೇಶ ಕರಡಕಲ್, ನಾಗರಾಜ ಗುತ್ತೇದಾರ್, ವಿಜಯಕುಮಾರ್, ಅಭಿಷೇಕ ನಾಯಕ, ಪ್ರೇಮ್ ಕುಮಾರ ಪಾಟೀಲ್, ಶಿವು ಪತ್ತಾರ್ ಸೇರಿ ಅನೇಕರು ಇದ್ದರು.

## ಮೊದಲನೇಯ ಪುಟದಿಂದ

# ರಾಯಚೂರು ಜಿಲ್ಲೆಯಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಶೂನ್ಯಕ್ಕಿಳಿಯಲಿ: ಜಿಪಂ ಸಿಇಓ

ಕಡಿಮೆ ತೂಕದ ಮಕ್ಕಳನ್ನು ಅಭಿಯಾನದ ರೂಪದಲ್ಲಿ ಆರೋಗ್ಯ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗಳು ಜಂಟಿಯಾಗಿ ಗುರುತಿಸಿ ವೈದ್ಯಕೀಯ ಚಿಕಿತ್ಸೆ ಹಾಗೂ ಪೌಷ್ಟಿಕ ಆಹಾರ ಒದಗಿಸುವ ಹಾಗೂ ಅಪೌಷ್ಟಿಕ ಮಕ್ಕಳ ಸಂಖ್ಯೆಯನ್ನು ಕಡಿಮೆ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸಿಇಓ ಅವರು ಸೂಚಿಸಿದರು.

ಹೆರಿಗೆ ನಂತರದಲ್ಲಿ ಜನನದ ಮಧ್ಯ ಅಂತರಕ್ಕಾಗಿ ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನ ಪಿಪಿಐಯುಸಿಡಿ ತಕ್ಷಣವೇ ಅಳವಡಿಕೆಗೆ ಒತ್ತು ನೀಡಲು ತಿಳಿಸಿದರು. ಅಲ್ಲದೆ ಪುರುಷರಿಗೆ ಎನ್‌ಎಸ್‌ವಿ ಶಸ್ತ್ರಚಿಕಿತ್ಸೆ ಬಗ್ಗೆ ಹೆಚ್ಚಿನ ಜಾಗೃತಿ ನೀಡಿ ಹಾಗೂ ಶಸ್ತ್ರಚಿಕಿತ್ಸಾ ಶಿಬಿರಗಳನ್ನು ಎಲ್ಲ ತಾಲೂಕುಗಳಲ್ಲಿ ಮಾಡಿಸಲು ತಿಳಿಸಿದರು.

ಆಯುಷ್ಮಾನ್ ಆರೋಗ್ಯ ಶಿಬಿರ: ಪ್ರತಿ ಮಂಗಳವಾರ ಆಯುಷ್ಮಾನ ಆರೋಗ್ಯ ಶಿಬಿರಗಳನ್ನು ತಪ್ಪದೆ ಹಮ್ಮಿಕೊಂಡು ರಕ್ತದೊತ್ತಡ, ಸಕ್ಕರೆ ಕಾಯಿಲೆ ಸೇರಿದಂತೆ ಇತರೆ ಪರೀಕ್ಷೆ ಹಾಗೂ ಅಗತ್ಯ ಚಿಕಿತ್ಸೆ ನೀಡಬೇಕು.

ಕ್ಷಯರೋಗ ಪತ್ತೆಗೆ ಇರುವ ಕಫ ಪರೀಕ್ಷೆ, ಟ್ರುನಾಟ್ ಹಾಗೂ ಸಿಬಿನಾಟ್ ಕೇಂದ್ರಗಳಲ್ಲಿ ಹೆಚ್ಚಿನ ಪರೀಕ್ಷೆ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಅಸಾಂಕ್ರಾಮಿಕ ರೋಗ ತಡೆ: ಹಾವು ಕಡಿತ, ನಾಯಿ ಕಡಿತ ಕುರಿತು ಹೆಚ್ಚಿನ ಜಾಗೃತಿ ನೀಡುವ ಜೊತೆಗೆ ಲಸಿಕೆಗಳನ್ನು ಎಲ್ಲ ಆರೋಗ್ಯ ಕೇಂದ್ರಗಳಲ್ಲಿ ದಾಸ್ತಾನು ಮಾಡಬೇಕು. ಡೆಂಗ್ಯು ರೋಗ ನಿಯಂತ್ರಣಕ್ಕಾಗಿ ಇನ್ನೂ ಹೆಚ್ಚಿನ ಜಾಗೃತಿ ಮೂಡಿಸಬೇಕು. ಹಾಗೂ ಮಲೇರಿಯಾ, ಜೆಇ ಪ್ರಕರಣಗಳ ನಿಯಂತ್ರಣಕ್ಕೆ ಅಗತ್ಯ ಕ್ರಮವಹಿಸಬೇಕು. ರಕ್ತದಾನದ ಮಹತ್ವ ಕುರಿತು ತಿಳಿಸಲು ಮತ್ತು ಜಿಲ್ಲೆಯಲ್ಲಿ ರಕ್ತ ಕೊರತೆಯಾಗದಿರಲು ಕ್ರಿಯಾ ಯೋಜನೆ ಹಾಕಿಕೊಂಡು ಸತತವಾಗಿ ರಕ್ತದಾನ ಶಿಬಿರ ಏರ್ಪಡಿಸಬೇಕೆಂದರು.

ಈ ವೇಳೆ ಸಿಇಓ ಅವರು ಡೆಂಗ್ಯು ರೋಗ ತಡೆಗೆ ಜಾಗೃತಿ ನೀಡಲು ಭಿತ್ತಿ ಪತ್ರವನ್ನು ಬಿಡುಗಡೆ ಮಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ವಿಜಯಶಂಕರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್‌ಕುಮಾರ್, ಜಿಲ್ಲಾ ಆಯುಷ್ ಅಧಿಕಾರಿ ಡಾ.ಶಂಕರಗೌಡ, ಸಮಿತಿ ಸದಸ್ಯ ಕಾರ್ಯದರ್ಶಿಗಳು ಆರ್.ಸಿ.ಹೆಚ್ ಅಧಿಕಾರಿ ಡಾ.ನಂದಿತಾ ಎಮ್ ಎನ್, ಡಿ.ಎಸ್.ಓ ಡಾ.ಗಣೇಶ್, ಡಿ.ಎಫ್.ಡ.ಬ್ಲ್ಯುಓ ಡಾ.ಶಿವಕುಮಾರ, ಡಿ.ಟಿ.ಓ ಡಾ.ಮಹಮ್ಮದ್ ಶಾಕೀರ್, ಡಿ.ಎಮ್.ಓ ಡಾ.ಚಂದ್ರಶೇಖರಯ್ಯ ಸ್ವಾಮಿ, ಡಿ.ಎಲ್.ಓ ಡಾ.ಯಶೋದಾ ಸೇರಿದಂತೆ ವಿವಿಧ ತಾಲೂಕು ಆರೋಗ್ಯಾಧಿಕಾರಿಗಳು, ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಡಿಹೆಚ್‌ಇಓ ಇತರರು ಇದ್ದರು.

# ರಾಜಣ್ಣ ವಜಾ ಕೋಲಾಹಲ



**ಬೆಂಗಳೂರು,ಆ.12–** ಸಚಿವ ಸಂಪುಟದಿಂದ ಕೆ.ಎನ್ ರಾಜಣ್ಣ ಅವರನ್ನು ವಜಾ ಮಾಡಿರುವ ವಿಚಾರ ವಿಧಾನ ಮಂಡಲದ ಉಭಯ ಸದನಗಳಲ್ಲಿ ಪ್ರತಿಧ್ವನಿಸಿ ಗದ್ದಲ–ಕೋಲಾಹಲಕ್ಕೆ ಕಾರಣವಾಯಿತು. ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ವಜಾ ಮಾಡಲು ಕಾರಣ ಏನು? ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸದನಕ್ಕೆ ಉತ್ತರ ನೀಡಬೇಕು ಎಂದು ಪ್ರತಿಪಕ್ಷಗಳು ವಿಧಾನಸಭೆಯಲ್ಲಿ ಇಂದು ಬಿಗಿಪಟ್ಟು ಹಿಡಿದವು. ಪ್ರಶ್ನೋತ್ತರ ಕಲಾಪ ಮುಗಿದ ನಂತರ ಸರ್ಕಾರ ಉತ್ತರ ನೀಡಲಿದೆ ಎಂದು ಸಚಿವ ಎಚ್.ಕೆ.ಪಾಟೀಲ್ ಭರವಸೆ ನೀಡಿ ಪ್ರತಿಪಕ್ಷ ಸದಸ್ಯರನ್ನು ಸಮಾಧಾನ'ಪಡಿಸಿದರು.

ಮತ್ತೊಂದೆಡೆ ಮೇಲ್ಮನೆಯಲ್ಲೂ ಸಚಿವ ರಾಜಣ್ಣ ವಿಚಾರ ಮಾರ್ದನಿಸಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಗದ್ದಲ, ಮಾತಿನ ಚಕಮಕಿ ನಡೆದು ಕೆಲಕಾಲ ಕಲಾಪ ಮುಂದೂಡಿದ ಪ್ರಸಂಗ ನಡೆಯಿತು.

ಸದನ ಆರಂಭವಾಗುತ್ತಿದ್ದಂತೆಯೇ ಪ್ರತಿಪಕ್ಷ ನಾಯಕ ಆರ್. ಅಶೋಕ್ ಅವರು ಸಚಿವ ರಾಜಣ್ಣನವರನ್ನು ಸಂಪುಟದಿಂದ ವಜಾ ಮಾಡಲಾಗಿದೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸದನಕ್ಕೆ ಮಾಹಿತಿ ನೀಡಬೇಕು ಎಂದು ಆಗ್ರಹಿಸಿದರು.

ಸದನದಲ್ಲಿ ನಾವು ಈ ವಿಚಾರ ಪ್ರಸ್ತಾಪಿ ಸಿದಾಗ ಸಂಸದೀಯ ವ್ಯವಹಾರಗಳ ಸಚಿವ ರಾದ ಹೆಚ್.ಕೆ. ಪಾಟೀಲ್ ಮಾಧ್ಯಮಗಳಲ್ಲಿ ಬರುವ ವಿಚಾರವನ್ನು ಚರ್ಚೆ ಮಾಡಲು ಸಾಧ್ಯವಿಲ್ಲ ಎಂದು ಹೇಳಿದ್ದರು. ನಿನ್ನೆಯೇ ರಾಜ್ಯಪಾಲರು ರಾಜಣ್ಣನವರನ್ನು ವಜಾ ಮಾಡಿರುವ ಆದೇಶಕ್ಕೆ ಸಹಿ ಹಾಕಿದ್ದಾರೆ. ಹಾಗಾಗಿ ಸದನಕ್ಕೆ ಈ ಬಗ್ಗೆ ತಿಳಿದುಕೊಳ್ಳುವ ಹಕ್ಕಿದೆ ಎಂದು ಆವರು ಪ್ರತಿಪಾದಿಸಿದರು.ವಿಧಾನ ಮಂಡಲದ ಅಧಿವೇಶನ ನಡೆಯುತ್ತಿರುವಾಗ ಸಚಿವರನ್ನು ವಜಾ ಮಾಡಿರುವ ಬಗ್ಗೆ ಸದನಕ್ಕೆ ಹೇಳಿಕೆ ನೀಡಬೇಕಾದದ್ದು ಸರ್ಕಾರದ

ಕರ್ತವ್ಯ. ಸಚಿವರನ್ನು ಪದಚ್ಯುತಿ ಮಾಡಿರುವ ವಿಚಾರವನ್ನು ಮಾಧ್ಯಮದಿಂದ ತಿಳಿದುಕೊಳ್ಳಬೇಕೇ, ಸರ್ಕಾರಕ್ಕೆ ಜವಾಬ್ದಾರಿ ಇಲ್ಲವೇ, ನಮ್ಮನ್ನು ಕತ್ತಲಲ್ಲಿಡಲಾಗಿದೆ. ತಕ್ಷಣವೇ ಉತ್ತರ ನೀಡಿ ಎಂದು ಆಗ್ರಹಿಸಿದರು.

ಸಚಿವ ರಾಜಣ್ಣನವರನ್ನು ಯಾರ ಕಾರಣದಿಂದ ಸಂಪುಟದಿಂದ ಕೈ ಬಿಡಲಾಗಿದೆ ಎಂಬ ಬಗ್ಗೆಯೂ ಸರ್ಕಾರ ಕಾರಣ ತಿಳಿಸಬೇಕು ಎಂದು ಅಶೋಕ್ ಒತ್ತಾಯಿಸಿದರು.

ಈ ಹಂತದಲ್ಲಿ ಆಡಳಿತ ಮತ್ತು ವಿಪಕ್ಷ ಸದಸ್ಯರ ನಡುವೆ ಪರಸ್ಪರ ಮಾತಿನ ಚಕಮಕಿ ನಡೆದು ಸದನದಲ್ಲಿ ಗದ್ದಲದ ವಾತಾವರಣ ರೂಪುಗೊಂಡಿತು.

ಈ ಹಂತದಲ್ಲಿ ಮಧ್ಯೆ ಪ್ರವೇಶಿಸಿ ಮಾತನಾಡಿದ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಆಂತರಿಕ ವಿಚಾರವನ್ನು ಚರ್ಚೆ ಮಾಡುವುದು ಬೇಡ ಎಂದಾಗ ವಿಪಕ್ಷ ಸದಸ್ಯರಾದ ಸುರೇಶ್‌ಕುಮಾರ್, ಸುನೀಲ್‌ಕುಮಾರ್ ಸೇರಿದಂತೆ ಎಲ್ಲ ಸದಸ್ಯರು ಎದ್ದುನಿಂತು ಸಭಾಧ್ಯಕ್ಷರ ಮಾತಿಗೆ ಆಕ್ಷೇಪ ವ್ಯಕ್ತಪಡಿಸಿ, ಇದು ಸರ್ಕಾರಕ್ಕೆ ಸಂಬಂಧಪಟ್ಟ ವಿಚಾರ. ಸರ್ಕಾರ ಉತ್ತರ ನೀಡಲೇಬೇಕು ಎಂದು ಪಟ್ಟು ಹಿಡಿದರು. ಆಗ ಸದನದಲ್ಲಿ ಗದ್ದಲ ಮತ್ತಷ್ಟು ಹೆಚ್ಚಾಯಿತು.

ಈ ಗದ್ದಲದಲ್ಲೇ ಮಾತು ಮುಂದುವರೆಸಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಸಚಿವ ರಾಜಣ್ಣನವರ ವಜಾ ಬಗ್ಗೆ ಸರ್ಕಾರ ನಿನ್ನೆಯೇ ಹೇಳಿಕೆ ನೀಡಬೇಕಿತ್ತು. ಆದರೆ ಮೌನವಾಗಿದೆ. ಉತ್ತರ ಕೊಡಿ, ಯಾವ ಕಾರಣಕ್ಕೆ ರಾಜಣ್ಣನವರನ್ನು ವಜಾ ಮಾಡಲಾಗಿದೆ. ಸತ್ಯ ಹೇಳಿದ್ದಕ್ಕೆ ಅವರನ್ನು ಬಲಿಪಶು ಮಾಡಲಾಗಿದೆಯೇ ಎಂದು ಪ್ರಶ್ನಿಸಿದರು.

ಇದಕ್ಕೆ ದನಿಗೂಡಿಸಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು, ರಾಹುಲ್‌ಗಾಂಧಿಯವರು ಬೆಂಗಳೂರಿಗೆ ಬಂದು ಮತಗಳ್ಳತನವಾಗಿದೆ ಎಂದು ಪ್ರತಿಭಟನಾ ಸಮಾವೇಶ ನಡೆಸಿದ್ದಾರೆ. ಹೀಗಿರುವಾಗ ರಾಜಣ್ಣನವರ ವಜಾ ವಿಚಾರ ಆಂತರಿಕ ವಿಚಾರದ ವ್ಯಾಪ್ತಿಗೆ ಬರಲ್ಲ, ಸರ್ಕಾರ ಉತ್ತರ ನೀಡಲೇಬೇಕು ಎಂದು ಆಗ್ರಹಿಸಿದರು.

ವಿಪಕ್ಷ ಸದಸ್ಯರು ತಮ್ಮ ಆಸನಗಳಿಂದ ಎದ್ದು ಸರ್ಕಾರ ಉತ್ತರ ನೀಡಬೇಕು ಎಂದು ಒತ್ತಾಯಿಸಿ ಧ'ರಣಿಗೆ ಮುಂದಾಗುತ್ತಿರುವುದನ್ನು ಗಮನಿಸಿದ ಸಭಾಧ್ಯಕ್ಷರು ಸರ್ಕಾರದ ಪರವಾಗಿ ಉತ್ತರ ನೀಡುವಂತೆ ಸಚಿವ ಹೆಚ್.ಕೆ. ಪಾಟೀಲ್‌ರವರಿಗೆ ಸೂಚನೆ ನೀಡಿದರು.

ಸಭಾಧ್ಯಕ್ಷರ ಸೂಚನೆಯಂತೆ ಎದ್ದುನಿಂತು ಮಾತನಾಡಿದ ಸಚಿವ ಹೆಚ್.ಕೆ. ಪಾಟೀಲ್ ಅವರು, ಮೊದಲು ಪ್ರಶ್ನೋತ್ತರ ಕಲಾಪ ನಡೆಯಲಿ. ಆ ಬಳಿಕ ಸಚಿವ ರಾಜಣ್ಣನವರ ವಜಾ ಬಗ್ಗೆ ಸರ್ಕಾರ ಉತ್ತರ ನೀಡಲಿದೆ ಎಂದು ಹೇಳಿ, ವಿರೋಧ ಪಕ್ಷದ ಸದಸ್ಯರನ್ನು ಸಮಾಧಾನಗೊಳಿಸುವ ಪ್ರಯತ್ನ ನಡೆಸಿದರು.

ಸಚಿವರ ಉತ್ತರದ ಬಳಿಕ ಪ್ರತಿಪಕ್ಷ ಸದಸ್ಯರು ಪ್ರಶ್ನೋತ್ತರ ನಂತರ ಉತ್ತರ ಕೊಡಲೇಬೇಕು ಎಂದು ಹೇಳಿದ ನಂತರ ಸದನದಲ್ಲಿ ವಾತಾವರಣ ತಿಳಿಯಾಯಿತು. ಸಭಾಧ್ಯಕ್ಷರು ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಂಡರು.

ಸದನ ಅರಂಭಗೊಂಡ ಕೂಡಲೇ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಮಾತನಾಡಿ, ಸಹಕಾರ ಸಚಿವರಾಗಿದ್ದ ಕೆ. ಎನ್. ರಾಜಣ್ಣ ಅವರು ಸಚಿವ ಸ್ಥಾನದಿಂದ ವಜಾಗೊಂಡಿರುವ ಕುರಿತ ರಾಜ್ಯಪಾಲರ ವಿಶೇಷ ಕಾರ್ಯದರ್ಶಿ ಸಹಿಯಿರುವ ಪತ್ರ ಓದಲು ಮುಂದಾದರು. ಇದಕ್ಕೆ ಆಡಳಿತ ಪಕ್ಷದ ಸಚೇತಕ ಸಲೀಂ ಅವರು ಆಕ್ಷೇಪ ವ್ಯಕ್ತಪಡಿಸಿದರು.

ಪ್ರಶೋತ್ತರ ಅವಧಿ ಮುಗಿದ ಬಳಿಕ ಮಾತನಾಡಿ ಎಂದು ಸಭಾಪತಿ ಬಸವರಾಜ ಹೊರಟ್ಟಿ ಅವರು ಸೂಚಿಸಿದರು. ಇದು ತುರ್ತು ವಿಷಯವಾಗಿದ್ದು, ರಾಜಣ್ಣ ಅವರನ್ನು ಸಚಿವ ಸ್ಥಾನದಿಂದ ಏಕೆ ವಜಾ ಮಾಡಿದರು ಎಂದು ಛಲವಾದಿ ನಾರಾಯಣ ಪ್ರಶ್ನಿಸಿದರು. ಇದಕ್ಕೆ ಬಿಜೆಪಿ ಸದಸ್ಯರಾದ ಸಿ. ಟಿ. ರವಿ. ರವಿಕುಮಾರ್ ಸೇರಿದಂತೆ ಇನ್ನಿತರ ಸದಸ್ಯರು ಧ್ವನಿಗೂಡಿಸಿದರು.ವಿಪಕ್ಷ ಸದಸ್ಯರ ಮಾತಿಗೆ ವಿರೋಧಿಸಿದ ಆಡಳಿತ ಪಕ್ಷದ ನಾಯಕರು, ರಾಜಣ್ಣ ಅವರ ಮೇಲೆ ಯಾವತ್ತಿನಿಂದ ಪ್ರೀತಿ ಬಂತು ಎಂದು ವ್ಯಂಗ್ಯವಾಡಿದರು. ಮಾತಿನ ಚಕಮಕಿ ಹೆಚ್ಚಾಗುತ್ತಿದ್ದಂತೆ 10 ನಿಮಿಷ ಕಲಾಪವನ್ನು ಸಭಾಪತಿ ಅವರು ಮುಂದೂಡಿದರು.ಸದನ ಮತ್ತೆ ಆರಂಭವಾಗುತ್ತಿದ್ದಂತೆ ರಾಜಣ್ಣ ಅವರನ್ನು ವಜಾಗೊಳಿಸಿರುವುದಾಗಿ ಮಾಧ್ಯಮಗಳಲ್ಲಿ ವರದಿಯಾಗಿದೆ. ವಜಾಗೊಳಿಸಲು ಕಾರಣವೇನು? ಭ್ರಷ್ಟಾಚಾರದಲ್ಲಿ ಅವರು ತೊಡಗಿಸಿಕೊಂಡಿದ್ದಾರೆಯೇ ಎಂದು ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದರು. ಮುಖ್ಯಮಂತ್ರಿಗಳಿಂದ ಅಥವಾ ಸಭಾ ನಾಯಕರಿಂದ ಉತ್ತರ ಕೊಡಿಸಿ ಎಂದು ಪಟ್ಟು ಹಿಡಿದರು. ಸಭಾ ನಾಯಕರು ಸದನಕ್ಕೆ ಬಂದಿಲ್ಲ. ಬಂದ ಬಳಿಕ ಅವರಿಂದ ಉತ್ತರ ಕೊಡಿಸಲಾಗುವುದು ಸಭಾಪತಿ ಅವರು ಭರವಸೆ ನೀಡಿದ್ದರಿಂದ ವಿಪಕ್ಷ ನಾಯಕರು ಸುಮ್ಮನಾಗಿದ್ದರಿಂದ ಸಭಾಪತಿಗಳು ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಂಡರು.

**ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ**

**9743497111 9743496111**

# ಹಿರಿಯ ಕಾಂಗ್ರೆಸ್ ಮುಖಂಡ ಬಾಬುಗೌಡ ಪಾಟೀಲ ಕಾಂಗ್ರೆಸ್‌ಗೆ ಗುಡ್ ಬೈ



**ಯುವ ಮಾರ್ಗ ಸುದ್ದಿ**

**ಆಳಂದ,ಆ.12–**ತಾಲೂಕಿನ ಭೂಸನೂರು ಗ್ರಾಮದ ಹಿರಿಯ ಕಾಂಗ್ರೆಸ್ ಮುಖಂಡ ಬಾಬುಗೌಡ ಪಾಟೀಲ ಅವರು ತಮ್ಮ ನೂರಾರು ಬೆಂಬಲಿಗರೊಂದಿಗೆ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾದರು.

ಇತ್ತೀಚಿಗೆ ಭೂಸನೂರ ಗ್ರಾಮದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ ಪಕ್ಷ ಸೇರ್ಪಡೆಯಾಗಿ ಮಾತನಾಡಿದ ಅವರು, ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಜನರ ವಿಶ್ವಾಸ ಕಳೆದುಕೊಂಡಿದೆ. ತಾಲೂಕಿನಲ್ಲಿ ಭೃಷ್ಟಾಚಾರ ಮನೆ ಮಾತಾಗಿದೆ ಇದರಿಂದ ಬೇಸತ್ತು ತಮ್ಮ ಕಾರ್ಯಕರ್ತರೊಂದಿಗೆ ಬೇಷರತ್ತಾಗಿ ಬಿಜೆಪಿ ಸೇರ್ಪಡೆಯಾಗುತ್ತಿದ್ದೇನೆ ಎಂದು ಹೇಳಿದರು.

ಮಾಜಿ ಶಾಸಕ ಸುಭಾಷ ಗುತ್ತೇದಾರ ಮಾತನಾಡಿ, ಬಾಬುಗೌಡ ಪಾಟೀಲ ಅವರ ಆಗಮನದಿಂದ ನಿಂಬರ್ಗಾ ಜಿ.ಪಂ ಕ್ಷೇತ್ರದ ವ್ಯಾಪ್ತಿಯಲ್ಲಿ ಬಿಜೆಪಿಗೆ ಆನೆಬಲ ಬಂದಂತಾಗಿದೆ. ಬಾಬುಗೌಡ ಪಾಟೀಲರು ಈ ಭಾಗದ ಹಿರಿಯ ಮುಖಂಡರಾಗಿದ್ದು ಅವರ ಮಾರ್ಗದರ್ಶನದಲ್ಲಿ ಪಕ್ಷ ಸಂಘಟನೆ ವ್ಯವಸ್ಥಿತವಾಗಿ ಸಾಗಲಿ ಅಲ್ಲದೇ ಹಿರಿಯ, ಕಿರಿಯ, ಮೂಲ, ಹಳೆಯ ಕಾರ್ಯಕರ್ತರನ್ನು ಸೇರಿಸಿಕೊಂಡು ಪಕ್ಷ ಸಂಘಟಿಸಲಿ ಎಂದು ಸಲಹೆ ನೀಡಿದರು.

ಬಾಬುಗೌಡ ಪಾಟೀಲ ನೇತೃತ್ವದಲ್ಲಿ ಶಾಂತಯ್ಯ ಸ್ಥಾವರಮಠ, ದಸ್ತಗೀರಸಾಬ್ ಗೌಂಡಿ, ಮಹಿಬೂಬ್‌ಸಾಬ್ ನದಾಫ್, ರಾಮ ಕೊಬಾಳೆ, ದತ್ತಣ್ಣಾ ಚೌಲ, ರಾಚಯ್ಯ ಸ್ವಾಮಿ, ಅಶೋಕ ಗುಂಡೆ, ದತ್ತು ಸಾಳುಂಕೆ, ಕಲ್ಯಾಣಿ ನಿಂಬಾಳ, ಸಿದ್ದಾರಾಮ ನೆಲ್ಲೂರ, ಗುಂಡಪ್ಪ ಪ್ಯಾಟಿ, ನೇಮಣ್ಣಾ ಬಳಗಾರ, ಶಿವಶರಣ ಕುಂಬಾರ, ಪಿಂಟು ಕ್ಷತ್ರಿ, ಅಭಿ ಕ್ಷೇತ್ರಿ, ರಾಮ ಕಲಶೆಟ್ಟಿ, ಫತ್ತುಸಾಬ ಬೆಣ್ಣೆಶಿರೂರ, ಗುರುಶಾಂತ ಜಮಾದಾರ, ಬಸವರಾಜ ಸೇರಿದಂತೆ ನೂರಾರು ಜನ ಪಕ್ಷ ಸೇರ್ಪಡೆಯಾದರು.

ಜಿ.ಪಂ ಮಾಜಿ ಉಪಾಧ್ಯಕ್ಷ ಹರ್ಷಾ ಗುತ್ತೇದಾರ ಮಾತನಾಡಿ, ಶಾಸಕ ಬಿ.ಆರ್ ಪಾಟೀಲ, ಕೆಎಂಎಫ್ ಅಧ್ಯಕ್ಷ ಆರ್ ಕೆ ಪಾಟೀಲ ಮಾಡುತ್ತಿರುವ ಭೃಷ್ಟಾಚಾರದ ವಿರುದ್ಧ ತಾವು ದೂರು ನೀಡುತ್ತಿರುವುದರಿಂದ ಅವರಿಗೆ ಭಯ ಶುರುವಾಗಿ ಹೋದಲ್ಲಿ ಬಂದಲೆಲ್ಲ ಅಪಪ್ರಚಾರ ಮಾಡುತ್ತಿದ್ದಾರೆ. ಮುಂದಿನ ದಿನಗಳಲ್ಲಿ ಆಳಂದ ತಾಲೂಕಿನಲ್ಲಿ ರಾಜಕೀಯ ಕ್ರಾಂತಿ ನಡೆಯಲಿದ್ದು 2028ಕ್ಕೆ ಆಳಂದನಲ್ಲಿ ಬಿಜೆಪಿ ಶಾಸಕರಾಗುವುದು ಶತಸಿದ್ಧ ಎಂದರು.

ಈ ಸಂದರ್ಭದಲ್ಲಿ ಪಕ್ಷದ ಮಂಡಲ ಅಧ್ಯಕ್ಷ ಮಲ್ಲಿಕಾರ್ಜುನ ಕಂದಗೂಳೆ, ಮುಖಂಡರಾದ ಅಣ್ಣಾರಾವ ಪಾಟೀಲ ಕವಲಗಾ, ಚಂದ್ರಕಾಂತ ಭೂಸನೂರ, ಶಿವಪ್ಪ ವಾರಿಕ, ಮಲ್ಲಣ್ಣ ನಾಗೂರೆ, ಅಶೋಕ ಗುತ್ತೇದಾರ, ಸಂತೋಷ ಗುತ್ತೇದಾರ, ಆನಂದ ಪಾಟೀಲ ಕೋರಳ್ಳಿ, ಶರಣಗೌಡ ಪಾಟೀಲ ದೇವಂತಗಿ, ನಾಗರಾಜ ಶೇಗಜಿ, ಮಹೇಶ ಗೌಳಿ, ಸಂತೋಷ ಹಾದಿಮನಿ, ಶ್ರೀಮಂತ ನಾಮಣೆ, ಗುಂಡಪ್ಪ ಪೂಜಾರಿ ಸೇರಿದಂತೆ ಅನೇಕ ಮುಖಂಡರು ಇದ್ದರು.

# ರಾಯಚೂರು ಜಿಲ್ಲೆಯಲ್ಲಿ ಯೂರಿಯಾ ರಸಗೊಬ್ಬರ ಲಭ್ಯ

**ರಾಯಚೂರು,ಆ.12–**ಇಲ್ಲಿನ ಜಂಟಿ ಕೃಷಿ ನಿರ್ದೇಶಕರ ಕಾರ್ಯಾಲಯದಿಂದ 2025–26 ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಗೆ ನಿಗದಿಪಡಿಸಿದ ಗುರಿಯಂತೆ ಯೂರಿಯಾ ರಸಗೊಬ್ಬರ ಜಿಲ್ಲೆಗೆ ಬರುತ್ತಿದ್ದು, ರಸಗೊಬ್ಬರದ ಕೊರತೆ ಬಗ್ಗೆ ರೈತರು ಆತಂಕಪಡುವ ಅವಶ್ಯಕತೆ ಇರುವುದಿಲ್ಲ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ್ ಚೌಹಾಣ್ ಅವರು ತಿಳಿಸಿದ್ದಾರೆ.

ಆಗಸ್ಟ್ 11ರಂದು ಆರ್‌ಎಪಿಸಿಎಮ್‌ಎಸ್ ರಾಯಚೂರು 19.98, ಟಿಎಪಿಸಿಎಮ್‌ಎಸ್ ಮಾನ್ವಿ–19.98, ಮಂಜು ಆಗ್ರೋ ಏಜೆನ್ಸೀಸ್ ರಾಯಚೂರು–9.99, ಧನುಷ್ ಅಗ್ರೋ ಏಜೆನ್ಸೀಸ್ ರಾಯಚೂರು–19.98, ಸಾಗರ್ ಎಂಟಪ್ರೈಸಸ್ ರಾಯಚೂರು–9.99, ಲಕ್ಷ್ಮಿ ಶ್ರೀನಿವಾಸ್ ಟ್ರೇಡರ್ಸ್ ರಾಯಚೂರು–9.99, ಬಸವೇಶ್ವರ ಅಗ್ರೋ ಏಜೆನ್ಸೀಸ್ ರಾಯಚೂರು– 9.99, ಹನುಮಾನ್ ಟ್ರೇಡರ್ಸ್ ಸಿರವಾರ–19.98, ಭೂಮಿ ಟ್ರೇಡರ್ಸ್ ಸಿರವಾರ–19.98, ಗಣೇಕಲ್ ಬಂಡಿ ವೀರನಗೌಡ ಸಿರವಾರ–9.99, ಮೂರ್ತಿ ಕವಿತಾಳ ಟ್ರೇಡರ್ಸ್–9.99, ವರಲಕ್ಷ್ಮಿ ಟ್ರೇಡರ್ಸ್ ಕವಿತಾಳ–9.99, ಸತ್ಯನಾರಾಯಣ್ ಕವಿತಾಳ –9.99, ವೀರೇಶ್ವರ ಅಗ್ರೋ ಏಜೆನ್ಸೀಸ್ ಗೋರೇಬಾಳ್–19.98, ಪಿಎಸಿಎಸ್ ಬುಡಿವಾಲ್–19.98, ಟಿಎಪಿಸಿಎಮ್‌ಎಸ್ ಸಿಂಧನೂರು–19.98, ಶ್ರೀ ಸಾಯಿ ಎಂಟಪ್ರೈಸಸ್ ಭೀಮರಾಜ್ ಕ್ಯಾಂಪ್–9.99, ಹುಲಿಗಮ್ಮ ಟ್ರೇಡರ್ಸ್ ಮುಕ್ಕುಂದ–9.99, ಶ್ರೀ ಬಾಲಾಜಿ ಎಂಟಪ್ರೈಸಸ್ ಬೂತಲದಿನ್ನಿ–9.99, ಶ್ರೀ ಬೈರೇಶ್ವರ ಮಸ್ಕಿ–9.99, ವೆಂಕಟ್ ನಾಗದೇವಿ ಟ್ರೇಡರ್ಸ್ ಗಾಂಧಿನಗರ–9.99, ದುರ್ಗಾ ಎಂಟಪ್ರೈಸಸ್ ಗಾಂಧಿನಗರ–9.99, ಸಾಯಿ ಹನುಮಾನ್ ಟ್ರೇಡರ್ಸ್ ಬಾಳೆಗಿಡ ಕ್ಯಾಂಪ್–9.99, ಶ್ರೀ ಭಾಗ್ಯಲಕ್ಷ್ಮಿ ಟ್ರೇಡರ್ಸ್ ಭೀಮರಾಜ–9.99, ಚನ್ನಮಲ್ಲಿಕಾರ್ಜುನ ಅಗ್ರೋ ಏಜೆನ್ಸೀಸ್ ಸಿಂಧನೂರು–9.99, ಶ್ರೀ ಸೂಗೂರೇಶ್ವರ ಟ್ರೇಡರ್ಸ್ ಶಾಂತಿನಗರ–9.99, ಅನ್ನಪೂರ್ಣೇಶ್ವರಿ ಅಗ್ರೋ ಟ್ರೇಡಿಂಗ್ ಕ್ಯಾಂಪ್ ಬ್ಯಾಗ್ವಾಟ್–9.99, ಶ್ರೀ ವಿಜಯಲಕ್ಷ್ಮಿ ಟ್ರೇಡರ್ಸ್ ಮಾನ್ವಿ–9.99, ಶ್ರೀ ಲಕ್ಷ್ಮೀ ಬಾಲಾಜಿ ಟ್ರೇಡಿಂಗ್ ಕಂಪನಿ ಮಾನ್ವಿ–9.99, ಶ್ರೀ ಸೂಗೂರೇಶ್ವರ ಟ್ರೇಡರ್ಸ್ ಮಾನ್ವಿ–9.99, ಪಾರಸ್ ಟ್ರೇಡರ್ಸ್ ಸಿಂಧನೂರು–19.8, ಆರ್ ವಿಟೋಬಾ ಶೆಟ್ಟಿ & ಸನ್ಸ್ ಮಾನ್ವಿ–39.6, ಶ್ರೀ ಲಕ್ಷ್ಮೀ ವೆಂಕಟೇಶ್ವರ ಆಗ್ರೋ ಕೇಂದ್ರ ಪೋತ್ನಾಲ್–19.8, ಶ್ರೀ ಬಸವೇಶ್ವರ ಆಗ್ರೋ ಕೇಂದ್ರ ದೇವದುರ್ಗ–39.6, ಆರ್.ಆರ್.ಎಂಟಪ್ರೈಸ್ ಪಗಡದಿನ್ನಿ ಕ್ಯಾಂಪ್–19.6, ರಾಘವೇಂದ್ರ ಎಂಟಪ್ರೈಸ್ ಪೋತ್ನಾಲ್–19.8, ಶ್ರೀ ಲಕ್ಷ್ಮಿ ವೆಂಕಟೇಶ್ವರ ಎಂಟಪ್ರೈಸ್ ಗಾಂಧಿನಗರ–19.8, ಪಿಎಸಿಎಸ್ ತಿಡಿಗೋಳ–19.8, ರಾಘವೇಂದ್ರ ಎಂಟಪ್ರೈಸ್ ಮಲ್ಕಾಪುರ–19.6, ಬಂದೇನವಾಜ್ ಕೋ. ಸಿಂಧನೂರು–19.6, ವೀರೇಶ್ವರ ಆಗ್ರೋ ಏಜೆನ್ಸಿಸ್ ಗೊರೆಬಳ್–19.8, ದುರ್ಗಾ ಎಂಟರ್ ಪ್ರೈಸ್ ಗಾಂಧಿನಗರ–4.95, ದೇವಿ ಎಂಟಪ್ರೈಸ್ ದುರ್ಗಾ ಕ್ಯಾಂಪ್–4.95, ಗಾಯತ್ರಿ ಟ್ರೇಡರ್ಸ್ ಗಾಂಧಿನಗರ–4.95, ಸಾಯಿ ಶ್ರೀಎಂಟಪ್ರೈಸ್ ಗಾಂಧಿನಗರ–4.95, ಬಂದೇನವಾಜ್ ಟ್ರೆಡಿಂಗ್ ಕಂಪನಿ ಸಿಂಧನೂರು–9.9, ಮಹಾವೀರ್ ಏಜೆನ್ಸಿಸ್ ಸಿಂಧನೂರು–9.9, ಸುಬ್ರಮಣ್ಯಂ ಟ್ರೇಡರ್ಸ್ ಕೆ.ಹಂಚಿನಾಳ್–9.9, ಲಕ್ಷ್ಮಿ ಟ್ರೇಡರ್ಸ್ ಕೆ. ಹಂಚಿನಾಳ್–9.9, ಪಿಎಸಿಎಸ್ ಸಿಂಧನೂರು–10, ಪಿಎಸಿಎಸ್ ಗುಂಜಳ್ಳಿ–10, ಪಿಎಸಿಎಸ್ ಅರಳಹಳ್ಳಿ–10, ಪಿಎಸಿಎಸ್ ಮಲ್ಲಾಪೂರ–10, ಪಿಎಸಿಎಸ್ ಹರಾಪುರಾ–10, ಪಿಎಸಿಎಸ್ ತುರ್ವಿಹಾಳ–10, ಪಿಎಸಿಎಸ್ ಜವಳಗೇರಾ–20 ಮೆಟ್ರಿಕ್ ಟನ್ ಯೂರಿಯಾ ಗೊಬ್ಬರವನ್ನು ರೈತರಿಗೆ ವಿತರಿಸಲಾಗಿದೆ ಎಂದು ಕೃಷಿ ಇಲಾಖೆಯ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಹರ್ ಘರ ತಿರಂಗಾ ಕಾರ್ಯಕ್ರಮ : ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



**ಬೀದರ್:ಆ.12–**ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಬೀದರ ಜಿಲ್ಲೆಯಾದ್ಯಂತ ಹರ್ ಘರ ತಿರಂಗಾ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿರುವುದು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಪತ್ರಿಕೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

2025–26ನೇ ಸಾಲಿನ ಹರ್ ಘರ ತಿರಂಗಾ ಅಂಗವಾಗಿ ಮಾನ್ಯ ಕಾರ್ಯದರ್ಶಿ ಸಂಸ್ಕೃತಿ ಮಂತ್ರಾಲಯ ಭಾರತ ಸರಕಾರರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಮತ್ತು ರಾಷ್ಟ್ರೀಯ ಅನುಷ್ಠಾನ ಸಮಿತಿ ಅನುಮೋದಿಸಿರುವಂತೆ ಕಾರ್ಯಕ್ರಮ ಯಶಸ್ವಿಯಾಗಿ ಹಮ್ಮಿಕೊಳ್ಳಲು ಭಾರತ ಸರ್ಕಾರವು ನಿರ್ಧರಿಸಿರುತ್ತದೆ.

ಅದರಂತೆ ಜಿಲ್ಲೆಯಾದ್ಯಂತ ಅಭಿಯಾನ ದ್ವಿತೀಯ ಹಂತವು ದಿನಾಂಕ: 12–08–2025 ರವರೆಗೆ ನಡೆಯಲಿದ್ದು, ಈ ಹಂತದಲ್ಲಿ ತಿರಂಗಾ ಮಹೋತ್ಸವ ಎಂಬ ಬೃಹತ್ ಕಾರ್ಯಕ್ರಮ ಆಯೋಜಿಸಲಾಗಿದ್ದು, ಅದರಲ್ಲಿ ತಿರಂಗಾ ಮೇಳೆ ಮತ್ತು ತಿರಂಗಾ ಸಂಗೀತೋತ್ಸವ ಇರುತ್ತವೆ. ತಿರಂಗಾ ಮೇಳೆದಲ್ಲಿ ಹಾರಗಳು, ದ್ವಿಪದಿಗಳು, ಆಹಾರಗಳು, ವಸ್ತುಗಳು, ಕರಕುಶಲ ವಸ್ತುಗಳು ಇತ್ಯಾದಿ ಸ್ಥಳೀಯ ಉತ್ಪನ್ನ ಮಾರಾಟ ತಿರಂಗಾ ದಿಂದ ಮಾಡುವುದು ಮತ್ತು ಸಾಮಾಜಿಕ ಜಾಲತಾ ಣಗಳಲ್ಲಿ ತಿರಂಗಾ ಕುರಿತಾದ ಸೆಲ್ಫಿಗಳನ್ನು ಅಪ್ಲೋಡ್ ಮಾಡುವುದು. ತಿರಂಗಾ ಬೈಕ್, ಸೈಕಲ್ ಈ ರ್ಯಾಲಿಗಳು ಹಾಗೂ ಜನಯಾತ್ರೆಯನ್ನು ಹಮ್ಮಿಕೊಳ್ಳಲಾಗಿದೆ.. ತಿರಂಗಾ ಬಟ್ಟೆಗಳನ್ನು ಧರಿಸಿ ಮಾನವ ಸರಪಳಿಗಳನ್ನು ನಿರ್ಮಿಸುವುದು ಮತ್ತು ತಿರಂಗಾ ಧ್ವಜಗಳ ಮಾರಾಟ ಮತ್ತು ವಿತರಣೆ ಮಾಡುವುದು. ತಿರಂಗಾ ಸಂಗೀತೋತ್ಸವದಲ್ಲಿ ದೇಶಭಕ್ತಿ ಕುರಿತಾದ ಹಾಗೂ ಬಾವುಟದ ಘನತೆಯನ್ನು ಬಿಂಬಿಸುವ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದ್ದಾರೆ.

ಯುವ ಮಾರ್ಗ ಬುಧವಾರ : 13–08–2025

# ರಾಜಣ್ಣ ಅಭಿಮಾನಿ ಆತ್ಮಹತ್ಯೆಗೆ ಯತ್ನ

**ತುಮಕೂರು, ಆ.12–** ಸಚಿವ ಸಂಪುಟದಿಂದ ಕೆ.ಎನ್. ರಾಜಣ್ಣ ರವರನ್ನು ವಜಾ ಮಾಡಿರುವುದರಿಂದ ಅಸಮಾಧಾನಗೊಂಡಿರುವ ಅಭಿಮಾನಿ ಹಾಗೂ ಯುವ ಕಾರ್ಯಕರ್ತನೋರ್ವ ಪ್ರತಿಭಟನೆ ನಡೆಸುತ್ತಿದ್ದ ವೇಳೆ ಪೆಟ್ರೋಲ್ ಸುರಿದುಕೊಂಡು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆ ಮಧುಗಿರಿ ಪಟ್ಟಣದಲ್ಲಿ ನಡೆದಿದೆ.



ಮಧುಗಿರಿಯಲ್ಲಿ ಕೆ.ಎನ್. ರಾಜಣ್ಣ ಅವರನ್ನು ಸಚಿವ ಸಂಪುಟದಿಂದ ವಜಾ ಮಾಡಿರುವುದನ್ನು ಖಂಡಿಸಿ ಅಭಿಮಾನಿಗಳು ಹಾಗೂ ಕೈ ಮುಖಂಡರು, ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಈ ಪ್ರತಿಭಟನಾ ಮೆರವಣಿಗೆ ವೇಳೆ ಶಿವಲಿಂಗಯ್ಯ ಎಂಬ ಯುವಕ ಸಚಿವ ಸಂಪುಟದಿಂದ ರಾಜಣ್ಣನವರನ್ನು ವಜಾ ಮಾಡಿರುವುದನ್ನು ಸಹಿಸಲಾಗದೆ ದಿಢೀರನೆ ಪೆಟ್ರೋಲ್ ಸುರಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ್ದಾನೆ. ತಕ್ಷಣ ಪಕ್ಕದಲ್ಲೇ ಪ್ರತಿಭಟನಾ ಮೆರವಣಿಗೆಯಲ್ಲಿ ಸಾಗುತ್ತಿದ್ದವರು ಆತನ ಕೈಯಲ್ಲಿದ್ದ ಬೆಂಕಿ ಪೊಟ್ಟಣ ಹಾಗೂ ಪೆಟ್ರೋಲ್ ಕಿತ್ತೆಸೆದು ದೂರು ಎಳೆದುಕೊಂಡು ಹೋಗಿ ರಕ್ಷಿಸಿದ್ದಾರೆ.

ಮಧುಗಿರಿಯಲ್ಲಿ ಕೆ.ಎನ್. ರಾಜಣ್ಣನವರನ್ನು ಸಂಪುಟದಿಂದ ವಜಾ ಮಾಡಿರುವುದರಿಂದ ಆಕ್ರೋಶ ಭುಗಿಲೆದ್ದಿದ್ದು, ಪಟ್ಟಣದಾದ್ಯಂತ ಅಂಗಡಿ ಮುಂಗಟ್ಟುಗಳನ್ನು ಬಾಗಿಲು ಬಂದ್ ಮಾಡಿಸಿ ಪ್ರತಿಭಟನೆ ನಡೆಸಲಾಗುತ್ತಿದೆ. ಅಂಗಡಿ ಮುಂಗಟ್ಟು ಬಂದ್ ಮಾಡದವರ ವಿರುದ್ಧವೂ ಆಕ್ರೋಶ ವ್ಯಕ್ತವಾಗಿದೆ.

ತಮ್ಮ ನೆಚ್ಚಿನ ನಾಯಕ ಕೆ.ಎನ್. ರಾಜಣ್ಣನವರ ಫೋಟೋ ಹಿಡಿದು ರಸ್ತೆಯುದ್ದಕ್ಕೂ ಮೆರವಣಿಗೆಯಲ್ಲಿ ಸಾಗಿದ ಪ್ರತಿಭಟನಾಕಾರರು ಬಸ್‌ಗಳನ್ನು ತಡೆದು ಬಸ್ ಕೆಳಗೆ ಮಲಗಿ ತಮ್ಮ ಆಕ್ರೋಶ, ಅಸಹನೆಯನ್ನು ವ್ಯಕ್ತಪಡಿಸಿದರು.

ಸಚಿವ ಸಂಪುಟದಿಂದ ರಾಜಣ್ಣನವರನ್ನು ವಜಾ ಮಾಡಿರುವುದು ತುಮಕೂರು ಜಿಲ್ಲೆಗೆ ಮಾಡಿದ ಅನ್ಯಾಯವಾಗಿದೆ. ಕೂಡಲೇ ಮುಖ್ಯಮಂತ್ರಿಗಳು ಮರು ಪರಿಶೀಲಿಸಿ ಸರಿಪಡಿಸುವಂತೆಯೂ ಪ್ರತಿಭಟನಾಕಾರರು ಒತ್ತಾಯಿಸಿದರು.

# ನ್ಯಾ॥ ನಾಗಮೋಹನ್ ದಾಸ್ ವರದಿಯಲ್ಲಿಎಸ್ಸಿ ಬಲಗೈ ಸಮುದಾಯಕ್ಕೆ ಆಗಿರುವ ಅನ್ಯಾಯ ಸರಿಪಡಿಸಲು ಆಗ್ರಹ




**ಬಳ್ಳಾರಿ,ಆ.12–** ನ್ಯಾಯಮೂರ್ತಿ ನಾಗಮೋಹನ್‌ದಾಸ್ ಒಳ ಮೀಸಲಾತಿಯ ಏಕ ಸದಸ್ಯ ವಿಚಾರಣಾ ಆಯೋಗವು ವರದಿಯಲ್ಲಿ ಪರಿಶಿಷ್ಟ ಜಾತಿ ಬಲಗೈ ಸೇರಿದ ಪರೈಯ್ಯ ಪರವನ್ ಜಾತಿಯನ್ನು ಸೇರಿಸಲಾರದೆ ಬಲಗೈ ಸಂಬಂದಿಸಿದ ಜಾತಿಗಳನ್ನು ಸೇರಿಸದೇ ಇನ್ನೂ ಹಲವು ಅತ್ಯಂತ ಹಿಂದುಳಿದ ಜಾತಿಗಳ ಗುಂಪಿಗೆ ಸೇರಿಸಿ ಬಲಗೈ ಛಲವಾದಿ ಸಮುದಾಯದ ಜನ ಸಂಖ್ಯೆಯನ್ನು ಉದ್ದೇಶಪೂರ್ವಕವಾಗಿ ಕಡಿಮೆ ಮಾಡಿರುವುದಲ್ಲದೇ, ಜಾತಿಯೇ ಅಲ್ಲದ ಆದಿ ಕರ್ನಾಟಕ, ಆದಿ ದ್ರಾವಿಡ, ಆದಿ ಆಂಧ್ರ ಇವುಗಳನ್ನು ಶೇಕಡ 1 ರಷ್ಟು ಮೀಸಲಾತಿ ಸೇರಿಸಿ ಕೊಂಡರಿಂದ ಕೂಡಲೇ ಅವುಗಳನ್ನು ರದ್ದು ಪಡಿಸಿ,ಸದರಿ ಬಲಗೈ ಜನಸಂಖ್ಯೆಗೆ ಅನುಗುಣವಾಗಿ ಸರಿಯಾಗಿ ಸಮೀಕ್ಷೆಯನ್ನು ಮಾಡಿಸಿ ಒಳ ಮೀಸಲಾತಿಯನ್ನು ಸಂಬಂಧಿಸಿದ ಜಾತಿಗಳಿಗೆ ಹಂಚಿಕೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಿಕ್ಕಾಗಿ ಛಲವಾದಿ ಮಹಾಸಭಾ ಒತ್ತಾಯಿಸಿ ಮನವಿ ಪತ್ರ ಸಲ್ಲಿಸಿದೆ.

ಈ ಕುರಿತು ಜಿಲ್ಲಾಧಿಕಾರಿಗಳ ಮೂಲಕ ರಾಜ್ಯದ ಮುಖ್ಯಮಂತ್ರಿಗಳಿಗೆ ಮನವಿಪತ್ರ ಸಲ್ಲಿಸಿದೆ. ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾ ಜಿಲ್ಲಾ ಸಮಿತಿಯ ಹಿರಿಯ ಮುಖಂಡ ಡಿ.ಸೂರಿ ಗೋವಿಂದ ನಾಗಲಕೇರ ಛಲವಾದಿ ಹಿರಿಯ ಮುಖಂಡರು ಸಿ ಆರ್ ಹನುಮಂತ ಕಂಪ್ಲಿ ಛಲವಾದಿ ಹಿರಿಯ ಮುಖಂಡರು ಸಿ ಶಿವಕುಮಾರ್ ಜಿಲ್ಲಾ ಅಧ್ಯಕ್ಷರು ಸಿ ಹನುಮೇಶ್ ಕಟ್ಟಿಮನಿ ಜಿಲ್ಲಾ ಕಾರ್ಯಾಧ್ಯಕ್ಷ ಕರ್ನಾಟಕ ದಲಿತ ರಕ್ಷಣಾ ವೇದಿಕೆ ಕೆ ಶಂಕರ್ ನಂದಿಹಾಳ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕರ್ನಾಟಕ ದಲಿತ ರಕ್ಷಣಾ ವೇದಿಕೆ ಮಾನಯ್ಯ ಬಿ ಗೋನಾಳ್ ಜಿಲ್ಲಾ ಉಪಾಧ್ಯಕ್ಷ ಛಲವಾದಿ ಮಹಾಸಭಾ ಛಲವಾದಿ ಲೋಕೇಶ್ ಕಪಗಲ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಛಲವಾದಿ ಮಹಾಸಭಾ ನಾಗರಾಜ್ ತೋಲಮಾಮೀಡಿ ಛಲವಾದಿ ಯುವ ಮುಖಂಡರು ಮಲ್ಲಿಕಾರ್ಜುನ ಬಿ ಗೋನಾಳ ಛಲವಾದಿ ಯುವ ಮುಖಂಡರು ಜಯರಾಮ ಜಲವಾದಿ ಮುಖಂಡರು ಗಿರೀಶ್ ಕುಡುತಿನಿ ಛಲವಾದಿ ಮುಖಂಡರು ಭಾವೈಕ್ಯ ವೆಂಕಟೇಶ್ ಛಲವಾದಿ ಹಿರಿಯ ಮುಖಂಡರು ವಿರುಪಾಕ್ಷಿ ಛಲವಾದಿ ಮುಖಂಡರು ದೇವೇಂದ್ರ ಕಂಪನಿ ಯುವ ಮುಖಂಡರು ಡಿ ವಿಠಲ್ ಛಲವಾದಿ ಮುಖಂಡರು ಶೇಷಪ್ಪ ಛಲವಾದಿ ಯುವ ಮುಖಂಡರು ಕೊಳಗಲ್ಲು ಮುಕ್ಕಣ್ಣ ಛಲವಾದಿ ಮುಖಂಡರು ಲಕ್ಷ್ಮಿಕಾಂತ್ ಸುಗ್ಗೆನಹಳ್ಳಿ ಛಲವಾದಿ ಮುಖಂಡರು ಯುವ ಮುಖಂಡರು ಮಧುರಾಜ್ ಬಿ ಗೋನಾಳ ಯುವ ಮುಖಂಡರು ರಮೇಶ ಮಾವಿನಹಳಿ ಯುವ ಮುಖಂಡರು ಡಿ ರಾಮಕೃಷ್ಣ ಛಲವಾದಿ ಕೇರಿ ಕೇಶವ ಕೇಶಪ್ಪ ಶೇಷಪ್ಪ ಛಲವಾದಿ ಕೇರಿ ಯುವ ಮುಖಂಡರು ಕಗ್ಗಲ್ ಈರಣ್ಣ ಛಲವಾದಿ ಯುವ ಮುಖಂಡರು ಉಪಸ್ಥಿತರಿದ್ದರು.

# ಬಾಲ್ಯವಿವಾಹ ತಡೆಗೆ ವಿದ್ಯಾರ್ಥಿಗಳು ಸಹ ಕೈ ಜೋಡಿಸಲು ಕರೆ

**ಬಳ್ಳಾರಿ,ಆ.12–** ಬಾಲ್ಯವಿವಾಹದ ದುಷ್ಪರಿಣಾಮಗಳು ಮತ್ತು ಮಕ್ಕಳ ರಕ್ಷಣೆ, ಬಾಲ್ಯವಿವಾಹ ತಡೆ ಕಾನೂನುಗಳ ಬಗ್ಗೆ ವಿದ್ಯಾರ್ಥಿಗಳು ಅರಿತುಕೊಂಡು ಬಾಲ್ಯವಿವಾಹ ತಡೆಯುವಲ್ಲಿ ಇಲಾಖೆಗಳ ಜೊತೆ ಕೈ ಜೋಡಿಸಿ ವಿದ್ಯಾರ್ಥಿಗಳು ತಮ್ಮ ಬೆಂಬಲ ನೀಡಬೇಕು ಎಂದು ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಎಳೆ ನಾಗಪ್ಪ ಹೇಳಿದರು.



ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಮಕ್ಕಳ ಸಹಾಯವಾಣಿ ಕೇಂದ್ರ, ಪೋಲಿಸ್ ಇಲಾಖೆ ಹಾಗೂ ಶಿಕ್ಷಣ ಇಲಾಖೆ ಇವರ ಸಹಯೋಗದಲ್ಲಿ ನಗರದ ಅಂದ್ರಾಳ್ ಪ್ರದೇಶದ ಸರ್ಕಾರಿ ಪ್ರೌಢಶಾಲೆಯಲ್ಲಿ ಶುಕ್ರವಾರ ಆಯೋಜಿಸಿದ್ದ "ಬಾಲ್ಯವಿವಾಹ, ಪೋಕ್ಸೋ ಕಾಯ್ದೆ ಮತ್ತು ಮೂಡ ನಂಬಿಕೆಗಳು ಹಾಗೂ ಮಕ್ಕಳ ಹಕ್ಕುಗಳ ರಕ್ಷಣೆ" ಕುರಿತು ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ನಿಮ್ಮ ಸುತ್ತ–ಮುತ್ತಲಿನ ಪ್ರದೇಶದಲ್ಲಿ ಬಾಲ್ಯವಿವಾಹ ನಡೆಯುತ್ತಿರುವುದು ಕಂಡುಬಂದರೆ ಮಕ್ಕಳ ಸಹಾಯವಾಣಿ ಸಂಖ್ಯೆ–1098 ಅಥವಾ ಪೋಲಿಸ್ ಸಹಾಯವಾಣಿ ಸಂಖ್ಯೆ–112 ಗೆ ಕರೆ ಮಾಡಿ ಮಾಹಿತಿ ನೀಡಬೇಕು ಎಂದು ತಿಳಿಸಿದರು.

ಸರ್ಕಾರಿ ಪ್ರೌಢಶಾಲೆಯ ಮುಖ್ಯಗುರುಗಳಾದ ರತ್ನಾದೇವಿ ಅವರು ಮಾತನಾಡಿ, ಬಾಲ್ಯವಿವಾಹ ಜಾಗೃತಿ ಕಾರ್ಯಕ್ರಮವನ್ನು ವಿದ್ಯಾರ್ಥಿಗಳು ತಿಳಿದುಕೊಂಡ ಬಾಲ್ಯವಿವಾಹ ತಡೆಗೆ ಮುಂದಾಗಬೇಕು. ತಮ್ಮ ಮನೆಯ ಸುತ್ತ–ಮುತ್ತಲಿನಲ್ಲಿ ಹಾಗೂ ತಮ್ಮ ಪೋಷಕರಿಗೆ ಈ ಕುರಿತು ಅರಿವು ಮೂಡಿಸಬೇಕು ಎಂದರು.

ಮಕ್ಕಳ ರಕ್ಷಣಾಧಿಕಾರಿ ಅಸಾಂಸ್ಥಿಕ ಸೇವೆಯ ಚನ್ನಬಸಪ್ಪ ಪಾಟೀಲ್ ಮಾತನಾಡಿ, ಮಕ್ಕಳು ಶಾಲೆಯಿಂದ ಹೊರಗುಳಿದ ಮಕ್ಕಳು ಬಾಲ್ಯವಿವಾಹ, ಬಾಲಕಾರ್ಮಿಕ, ಭಿಕ್ಷಾಟನೆ, ಕಳ್ಳಸಾಗಾಣೆಗೆ ಒಳಗಾಗುತ್ತಿರುವುದು ಕಂಡುಬರುತ್ತಿದ್ದು, ಅಂತಹ ಮಕ್ಕಳನ್ನು ಗುರುತಿಸಿ ಅವರ ಹಕ್ಕುಗಳು ಉಲ್ಲಂಘನೆಯಾಗದಂತೆ ಅವರ ಪಾಲನೆ, ಪೋಷಣೆ, ರಕ್ಷಣೆ ನೀಡುವ ಹಾಗೂ ಪುನರ್ವಸತಿ ಕಲ್ಪಿಸುವುದು ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಉದ್ದೇಶವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಸಿಆರ್‌ಪಿ ಆರ್.ವಿಜಯ ಕುಮಾರ್ ಅವರು ವಿದ್ಯಾರ್ಥಿಗಳಿಗೆ ಬಾಲ್ಯವಿವಾಹ ತಡೆ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಂದರ್ಭದಲ್ಲಿ ಕಾನೂನು ಪರಿವೀಕ್ಷಣಾಧಿಕಾರಿ ಈಶ್ವರ ರಾವ್, ಪೊಲೀಸ್ ಇಲಾಖೆಯ ನವದುರ್ಗಿ ತಂಡದ ವಿದ್ಯಾ ಬಾರ್ಕಿ, ಅಂಗನವಾಡಿ ಮೇಲ್ವಿಚಾರಕಿ ನಂದಿನಿ, ಸರ್ಕಾರಿ ಪ್ರಾಥಮಿಕ ಶಾಲೆಯ ಗಾಯಿತ್ರಿ, ತಿಪ್ಪೇಸ್ವಾಮಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಿಬ್ಬಂದಿಗಳಾದ ನಿಲೋಫಿಯಾ, ಚಂದ್ರಕಳಾ ಸೇರಿದಂತೆ ಆರೋಗ್ಯ ಇಲಾಖೆಯ ಸಿಬ್ಬಂದಿಗಳು, ಆಶಾ–ಅಂಗನವಾಡಿ ಕಾರ್ಯಕರ್ತೆಯರು, ಶಾಲಾ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಪ್ರತಿ ಎಕರೆಗೆ 100 ಟನ್ ಕಬ್ಬು ಇಳುವರಿ ಸಾಧ್ಯ: ಬಸವರಾಜ ಪಾಟೀಲ್ ಕೊರಳ್ಳಿ



**ಕಲಬುರಗಿ,ಆ.12–**ಕಬ್ಬು ಬೆಳೆಯುವ ರೈತರು ಸಾಂಪ್ರದಾಯಿಕ ಶೈಲಿಯ ಬದಲು ವೈಜ್ಞಾನಿಕ ಅನುಷ್ಠಾನ ಕ್ರಮಗಳನ್ನು ಕೈಗೊಳ್ಳುವ ಮೂಲಕ ಪ್ರತಿ ಎಕರೆಯಲ್ಲಿ 100 ಟನ್‌ಗೂ ಹೆಚ್ಚು ಕಬ್ಬು ಇಳುವರಿ ಪಡೆಯಲು ಸಾಧ್ಯವಿದೆ ಎಂದು ಪ್ರಗತಿಪರ ರೈತ ಹಾಗೂ ಆಳಂದ ಪಟ್ಟಣದ ಸಾಯಿಶರಣ ಕೃಷಿ ಕೇಂದ್ರ ಸಂಚಾಲಕ ಬಸವರಾಜ ಪಾಟೀಲ್ ಕೊರಳ್ಳಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಈಗಾಗಲೇ ಸಾಯಿಶರಣ ಕೃಷಿ ಕೇಂದ್ರದ ವತಿಯಿಂದ ಕಬ್ಬು ಬೆಳೆಯುವ ರೈತರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಮೇಲಿಂದ ಮೇಲೆ ಹಮ್ಮಿಕೊಳ್ಳುತ್ತಾ ಬರಲಾಗುತ್ತಿದೆ. ಈ ದಿಸೆಯಲ್ಲಿ ಆಳಂದ ತಾಲೂಕಿನ ಭೂಸನೂರ ಸಮೀಪದ ಎನ್‌ಎಸ್‌ಎಲ್ ಸಕ್ಕರೆ ಕಾರ್ಖಾನೆ (ಎನ್‌ಎಸ್‌ಎಲ್ ಶುಗರ್ಸ್ ಲಿಮಿಟೆಡ್) ಸಹ ರೈತರೊಂದಿಗೆ ಈ ಜೋಡಿಸಲು ಮುಂದೆ ಬರುವುದಾಗಿ ಆಶ್ವಾಸನೆ ನೀಡಿರುವುದು ಆಶಾದಾಯಕ ಬೆಳವಣಿಗೆ ಎಂದು ಸಮಾಧಾನ ವ್ಯಕ್ತಪಡಿಸಿದರು.

ಇದೇ ಆಗಸ್ಟ್ 6ರಂದು ಎನ್‌ಎಸ್‌ಎಲ್ ಸಕ್ಕರೆ ಕಾರ್ಖಾನೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಪಿ.ಪ್ರಸಾದ್‌ಬಾಬು ಅವರು ತಡಕಲ್ ಸಮೀಪದ ಮೂರು ಎಕರೆ ಹಾಗೂ ಆಳಂದ ಬಳಿಯಿರುವ ಐದು ಎಕರೆ ಕಬ್ಬು ಪ್ರಾತ್ಯಕ್ಷಿಕಾ ಪ್ರದೇಶಗಳಿಗೆ ಭೇಟಿ ನೀಡಿದ್ದ ವೇಳೆ ವೈಜ್ಞಾನಿಕವಾಗಿ ಕಬ್ಬು ಬೆಳೆದಿರುವ ಒಂಬತ್ತು ತಳಿಯ ಕಬ್ಬಿನ ಫಸಲು ಕಂಡು ಸಮಾಧಾನ ವ್ಯಕ್ತಪಡಿಸಿದ್ದಾರೆ. ಇದೇವೇಳೆ, ಪ್ರತಿ ಎಕರೆ ಪ್ರದೇಶದಲ್ಲಿ 100 ಟನ್‌ಗೂ ಹೆಚ್ಚು ಕಬ್ಬು ಇಳುವರಿ ಪಡೆಯಬಹುದು ಎಂಬುದನ್ನು ಅವರಿಗೆ ಮನದಟ್ಟು ಮಾಡಿಕೊಡಲಾಗಿದೆ ಎಂದು ಕೊರಳ್ಳಿ ವಿವರಿಸಿದರು.

ಪ್ರತಿ ಎಕರೆ ಪ್ರದೇಶದಲ್ಲಿ 100 ಟನ್‌ಗೂ ಹೆಚ್ಚು ಕಬ್ಬು ಇಳುವರಿ ಪಡೆಯಬೇಕಾದರೆ ರೈತರು ಸಕಾಲಕ್ಕೆ ರಸಗೊಬ್ಬರ ಖರೀದಿಸಲು ಅನುಕೂಲವಾಗುವಂತೆ ಪ್ರತಿ ಎಕರೆಗೆ ರೂ.75 ಸಾವಿರ ಮುಂಗಡ ಹಣ ನೀಡಬೇಕೆಂದು ಎನ್‌ಎಸ್‌ಎಲ್ ಸಕ್ಕರೆ ಕಾರ್ಖಾನೆಯ ಸಿಇಒ ಅವರನ್ನು ಕೋರಲಾಗಿದೆ. ಈ ಪ್ರಸ್ತಾವನೆಗೆ ಸಿಇಒ ಪ್ರಸಾದ್ ಬಾಬು ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ ಎಂದು ನುಡಿದರು.

ಕಬ್ಬು ನಾಟಿ ಮಾಡುವ ರೈತರು ಪ್ರತಿ ಎಕರೆಯಲ್ಲಿ ಉತ್ತಮ ಇಳುವರಿ ಪಡೆಯಬೇಕಾದರೆ ಕಾಲಕಾಲಕ್ಕೆ ರಸಗೊಬ್ಬರ ಪೂರೈಸಬೇಕಾಗುತ್ತದೆ. ಆದರೆ, ಬಹುತೇಕ ರೈತರು ಕಬ್ಬು ನಾಟಿ ಬಳಿಕ ಕೈ ಖಾಲಿ ಮಾಡಿಕೊಂಡಿರುತ್ತಾರೆ. ಇಂತಹ ಪರಿಸ್ಥಿತಿಯಲ್ಲಿ ಕಾಲಕಾಲಕ್ಕೆ ಕಬ್ಬಿಗೆ ರಸಗೊಬ್ಬರ ನೀಡುವುದು ಬಹುತೇಕ ಸಂದರ್ಭಗಳಲ್ಲಿ ಕಷ್ಟಸಾಧ್ಯವಾಗುತ್ತದೆ. ಹೀಗಾಗಿ, ರೈತರು 'ಬಂದಷ್ಟೇ ಬರಲಿ' ಎಂದು ಕೈಚೆಲ್ಲುವ ಅಸಹಾಯಕ ಸ್ಥಿತಿ ಅನಿವಾರ್ಯವಾಗಿ ಎದುರಾಗುತ್ತದೆ. ಆದ್ದರಿಂದ ರೈತರ ಈ ಸ್ಥಿತಿಯನ್ನು ಅರ್ಥ ಮಾಡಿಕೊಂಡು ಎನ್‌ಎಸ್‌ಎಲ್ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿ ಕಬ್ಬು ನಾಟಿ ಸಂದರ್ಭದಲ್ಲಿ ಪ್ರತಿ ಎಕರೆಗೆ ಅತ್ಯಂತ ಕನಿಷ್ಠ ಪ್ರಮಾಣದ ಮುಂಗಡ ನೀಡುತ್ತಿದ್ದು, ಇದರ ಬದಲು ಪ್ರತಿ ಎಕರೆಗೆ ರೂ.75 ಸಾವಿರ ಮುಂಗಡ ಹಣ ನೀಡಬೇಕು. ಮುಂದೆ ರೈತರು ಕಬ್ಬು ಕಟಾವು ಮಾಡಿ ಕಾರ್ಖಾನೆಗೆ ಕಬ್ಬು ಪೂರೈಸಿದಾಗ ರೈತರಿಗೆ ಅದಾಗಲೇ ನೀಡಿರುವ ಮುಂಗಡ ಹಣವನ್ನು ಕಬ್ಬಿನ ಬಿಲ್ ಜೊತೆಗೆ ಹೊಂದಿಸಿಕೊಂಡು ಬಾಕಿ ಬಿಲ್ ನೀಡಬಹುದಾಗಿದೆ ಎಂಬ ನಮ್ಮ ಸಲಹೆಗೆ ಸಿಇಒ ಪ್ರಸಾದ್‌ಬಾಬು ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ. ಈ ನಿಟ್ಟಿನಲ್ಲಿ ಮುಂದಿನ ಒಂದು ತಿಂಗಳಲ್ಲಿ ಸುಮಾರು 2000 ರೈತರನ್ನು ಒಳಗೊಂಡ ಸಭೆ ಕರೆದು ಮತ್ತೊಮ್ಮೆ ಸುದೀರ್ಘ ಚರ್ಚೆ ನಡೆಸಲು ಅವರು ಒಪ್ಪಿಗೆ ಸೂಚಿಸಿದ್ದಾರೆ ಎಂದು ಹೇಳಿದರು.

ಕಬ್ಬು ಬೆಳೆಯುವ ರೈತರಾದ ಮಲ್ಲಿಕಾರ್ಜುನ ತಡಕಲ್, ಶರಣಗೌಡ ಪಾಟೀಲ್ ಹಳ್ಳಿಸಲಗರ, ಲಿಂಗರಾಜ ಪಾಟೀಲ್ ಝುಳಕಿ ಹಾಗೂ ಶರಣಗೌಡ ಪಾಟೀಲ್ ಕೂಡಲ ಹಂಗರಗಾ ಸೇರಿದಂತೆ ಇನ್ನಿತರರು ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಕೆಸಿಇಡಿಟಿ ಬಾಲಕಿಯರ ಪ್ರೌಢ ಶಾಲೆಯಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ

**ಕಲಬುರಗಿ,ಆ.12–**ಇಲ್ಲಿನ ಆದರ್ಶ ನಗರದ ಕೆಸಿಇಡಿಟಿ ಬಾಲಕಿಯರ ಪ್ರೌಢ ಶಾಲೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ಮತ್ತು ಎಲ್‌ಕೆಜಿಯಿಂದ 9ನೇ ವರ್ಗದವರೆಗಿನ ಎಲ್ಲಾ ವರ್ಗಗಳ ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ನೀಡಿ ಸನ್ಮಾನಿಸಿ ಗೌರವಿಸಲಾಯಿತು.



ಮಾರ್ಚ್ 2025ರ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇ.96.32 ಅಂಕಗಳನ್ನು ಪಡೆದು ಶಾಲೆಗೆ ಪ್ರಥಮ ಸ್ಥಾನ ಪಡೆದ ಕುಮಾರಿ ಗೌರಿ ತಂದೆ ಮಹಾರುದ್ರಪ್ಪ ಅವರಿಗೆ ಶಾಸಕ ಅಲ್ಲಮಪ್ರಭು ಪಾಟೀಲ ಅವರು ನಗದು ಬಹುಮಾನ ಮತ್ತು ಪ್ರಶಸ್ತಿ ನೀಡಿ ಗೌರವಿಸಿದರು. ಅಲ್ಲದೆ ಎಲ್‌ಕೆಜಿಯಿಂದ 9ನೇ ತರಗತಿಯವರೆಗಿನ ಎಲ್ಲಾ ವರ್ಗಗಳ ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದ ವಿದ್ಯಾರ್ಥಿಗಳನ್ನು ಗೌರವಿಸಲಾಯಿತು. ವಿದ್ಯಾರ್ಥಿಗಳ ಜೊತೆಗೆ ಅವರ ಪಾಲಕರನ್ನು ಸತ್ಕರಿಸಿದ್ದು, ವಿಶೇಷವಾಗಿತ್ತು.

ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಶಾಸಕ ಅಲ್ಲಮಪ್ರಭು ಪಾಟೀಲ ಅವರು, ಪ್ರಶಸ್ತಿ ಪಡೆದ ಎಲ್ಲಾ ವಿದ್ಯಾರ್ಥಿಗಳನ್ನು ಅಭಿನಂದಿಸಿದರಲ್ಲದೆ ಉಳಿದ ವಿದ್ಯಾರ್ಥಿಗಳು ಇದರಿಂದ ಸ್ಫೂರ್ತಿ ಪಡೆದು ಮುಂದಿನ ವರ್ಷ ತಾವೂ ಕೂಡ ಹೆಚ್ಚು ಅಂಕಗಳನ್ನು ಪಡೆದು ಶಾಲೆಗೆ ಗೌರವ ತರಬೇಕು ಎಂದು ಕರೆ ನೀಡಿದರು.

ಆಡಳಿತ ಮಂಡಳಿಯ ಮನವಿಗೆ ಸ್ಪಂದಿಸಿದ ಶಾಸಕರು ಹೆಚ್ಚುವರಿ ಕೋಣೆ ನಿರ್ಮಾಣಕ್ಕೆ ಶಾಸಕರ ನಿಧಿಯಿಂದ 5 ಲಕ್ಷ ರೂ.ಅನುದಾನ ನೀಡುವುದಾಗಿ ಘೋಷಿಸಿದರು.

ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೂರ್ಯಕಾಂತ ಮದಾನೆ ಅವರು ಶಾಲಾ ವಾರ್ಷಿಕ ಪತ್ರಿಕೆ ವಿದ್ಯಾವಿಕಾಸ ಲೋಕಾರ್ಪಣೆ ಮಾಡಿ ಶಾಲೆಯ ಮುಖ್ಯೋಪಾಧ್ಯಾಯಿನಿ ಮೀನಾಕ್ಷಿ ಪಲ್ಲೇದ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಕೆಸಿಇಡಿಟಿ ಶಾಲಾ ಆಡಳಿತ ಮಂಡಳಿ ಅಧ್ಯಕ್ಷರಾದ ಅಪ್ಪಾರಾವ ಅಕ್ಕೋಣಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯಿನಿ ಜಯಶ್ರೀ ಹಿರೇಮಠ ವಂದಿಸಿದರು. ಶಾಲಾ ಆಡಳಿತ ಮಂಡಳಿ ಸದಸ್ಯರು, ವಿದ್ಯಾರ್ಥಿಗಳು ಮತ್ತು ಪಾಲಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

# ಸಂಯಮದಲ್ಲಿದೆ ಬದುಕಿನ ಶ್ರೇಯಸ್ಸು

**ಬಸವಕಲ್ಯಾಣ,ಆ.12–**ಸಂಯಮಶೀಲ ಬದುಕಿನಿಂದ ಆತ್ಮೋನ್ನತಿಯ ಶ್ರೇಯಸ್ಸು ಕಾಣಲು ಸಾಧ್ಯವಾಗುತ್ತದೆ ಎಂದು ಹಾರಕೂಡದ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.



ತಾಲೂಕಿನ ಹಾರಕೂಡ ಶ್ರೀಮಠದ ಶ್ರೀ ಚನ್ನ ರೇಣುಕ ಬಸವ ಮಂಟಪದಲ್ಲಿ ಶ್ರಾವಣ ಮಾಸದ ಮಧ್ಯ ಸೋಮವಾರ ಅಂಗವಾಗಿ ಜರುಗಿದ ಧರ್ಮ ಸಭೆ ಉದ್ಘಾಟಿಸಿ ಮಾತನಾಡಿದ ಶ್ರೀಗಳು ಶ್ವೇಚ್ಛಾಚಾರವಿಲ್ಲದ ವಿವೇಕ ಸಹಿತವಾದ ನೆಮ್ಮದಿಯ ಬದುಕು ಸಾಗಿಸಲು ದಿವ್ಯತೆಯ ಭಾವ ಅರಳಲು ಶ್ರಾವಣ ಮಾಸ ಅದ್ಭುತ ಸನ್ನಿವೇಶ ಒದಗಿಸಿಕೊಡುತ್ತದೆ.ಅಂತರಂಗದ ಕಲಹ, ದುಗುಡ, ತಳಮಳಗಳು ಹಿಂದೆಂದಿಗಿಂತಲೂ ಇಂದು ಹೆಚ್ಚಾಗಿ ಕಂಡು ಬರುತ್ತಿರುವುದರಿಂದ ಇವುಗಳಿಂದ ಹೊರಬರಲು ಸತ್ಸಂಗ, ಸದಾಚಾರ, ಸದ್ಭಾವಗಳ ನೆಲೆಯಲ್ಲಿ ಪೂರ್ಣತೆಯಡೆಗೆ ಹೆಜ್ಜೆ ಹಾಕಲು ಶ್ರಾವಣ ಮಸ ಅತ್ಯಂತ ಪ್ರಶಸ್ತ ಕಾಲವಾಗಿದೆ.ಹಾಗಾಗಿ ಭಜನೆ, ಕೀರ್ತನೆ, ಪ್ರವಚನ ಇತ್ಯಾದಿಗಳ ಮುಖೇನ ಮನದ ಭಾರ ಕಳಚಿ ಸಹಜ ಸುಂದರ ಬಾಳ್ವೆಗೆ ಅಣಿಯಾಗಬೇಕೆನ್ನುವುದೇ ನಮ್ಮ ಆಶಯವಾಗಿದೆ ಎಂದು ನುಡಿದರು.ಸೇರಿರುವ ಎಲ್ಲ ಭಕ್ತರ ಕಷ್ಟ ಕಳೆದು ಸಾತ್ವಿಕ ಇಷ್ಟಾರ್ಥ ಲಭಿಸುವಂತೆ ಲಿಂಗೈಕ್ಯ ಚನ್ನಬಸವ ಶಿವಯೋಗಿಗಳು ಅನುಗ್ರಹ ಕರುಣಿಸಲಿ ಎಂದು ಶುಭ ಹಾರೈಸಿದರು.ಮಲ್ಲಿನಾಥ ಹಿರೇಮಠ ಹಾರಕೂಡ ಸ್ವಾಗತಿಸಿದರು.ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ.ಕೆ. ಹಿರೇಮಠ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ, ಪ್ರತ್ವಿರಾಜ ದೇಗಾಂವ ಇದ್ದರು.

